ಸಂಪಾದಕರು
ಆನಂದಯ್ಯ ವಿರಕ್ತಮಠ
ಎಂ.ಎ ಪತ್ರಿಕೋದ್ಯಮ
ಎಂ.ಎ ಇಂಗ್ಲೀಷ್ , ಬಿ.ಇಡಿ

Title code: KNKAN/26/A0482

# ಜನಶ್ರೀ ಟೈಮ್ಸ್

ಕನ್ನಡ ದಿನಪತ್ರಿಕೆ

JANASHREE TIMES janashreetimes2026@gmail.com KANNADA DAILY MORNING

ಸಂಪುಟ : 01 ಸಂಚಿಕೆ : 02 ದಿನಾಂಕ: 05-06-2026 ಶುಕ್ರವಾರ ಪುಟ : 04 ದರ : 4 ರೂ. VOLUME 01 ISSUE:01 THURSDAY 21-05-2026 PAGE: 04 PRICE : 4/-

# ಚುರುಕುಗೊಂಡ ಮುಂಗಾರು, ರಾಜ್ಯದಾದ್ಯಂತ ಅಬ್ಬರಿಸಲಿದೆ ಮಳೆ, ಹವಾಮಾನ ಇಲಾಖೆ ಮುನ್ಸೂಚನೆ

ಬೆಂಗಳೂರು: ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕುಗೊಳ್ಳುತ್ತಿದ್ದು, ರಾಜ್ಯದಾದ್ಯಂತ ಮಳೆಯ ಆರ್ಭಟ ಜೋರಾಗಲಿದೆ ಎಂದು ಹವಾಮಾನ ಇಲಾಖೆ ಮತ್ತು ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ಎಚ್ಚರಿಕೆ ನೀಡಿದೆ.ರಾಜ್ಯದ ವಿವಿಧ ಭಾಗಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಮಳೆಯ ಅಬ್ಬರ ಮುಂದುವರಿಯಲಿದ್ದು, ಜೂನ್ 9ರವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರ ಕರ್ನಾಟಕ, ದಕ್ಷಿಣ ಕರ್ನಾಟಕ ಹಾಗೂ ಕರಾವಳಿ ಭಾಗಗಳ ಹಲವು ಜಿಲ್ಲೆಗಳಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರಲು ಸೂಚಿಸಲಾಗಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಈಗಾಗಲೇ ಮುಂಗಾರು ಚುರುಕುಗೊಂಡಿದ್ದು, ಮುಂದಿನ 24 ಗಂಟೆಗಳಲ್ಲಿ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆ ಉತ್ತರ ಮತ್ತು ಕಲ್ಯಾಣ ಕರ್ನಾಟಕ ಭಾಗದ 11 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಭಾರೀ ಮಳೆಯ ಜೊತೆಗೆ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ರೈತರು, ವಾಹನ ಸವಾರರು ಹಾಗೂ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಜೂನ್ 4ರಿಂದ 12ರವರೆಗೆ ಕರಾವಳಿ, ಮಲೆನಾಡು ಮತ್ತು ಉತ್ತರ ಒಳನಾಡು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಗುಡುಗು, ಮಿಂಚು ಮತ್ತು ಗಂಟೆಗೆ 60 ಕಿ.ಮೀ ವೇಗದ ಬಿರುಗಾಳಿ ಸಹಿತ ಮಳೆಯಾಗುವ ನಿರೀಕ್ಷೆಯಿದೆ.



ನಾಳೆಯಿಂದ 9ರವರೆಗೆ ರಾಜ್ಯದಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. ಮಲೆನಾಡು ಪ್ರದೇಶಗಳಾದ ಕೊಡಗು, ಚಿಕ್ಕಮಗಳೂರು, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಜೂನ್ 7ರಿಂದ 9ರವರೆಗೆ ಮಧ್ಯಮದಿಂದ ಭಾರೀ ಮಳೆಯಾಗುವ ಸೂಚನೆ ಇದೆ. ಉತ್ತರ ಕರ್ನಾಟಕದ ಬೆಳಗಾವಿ, ಹಾವೇರಿ, ಬಾಗಲಕೋಟೆ, ಕೊಪ್ಪಳ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಜೂನ್ 5ರವರೆಗೆ ಗಂಟೆಗೆ 40–50 ಕಿ.ಮೀ ವೇಗದ ಬಲವಾದ ಗಾಳಿ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿ ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡದಲ್ಲಿ ಮುಂಗಾರು ರೀತಿಯ ಮಳೆ ಆರಂಭವಾಗಿದೆ. ಜೂನ್ 8ರಿಂದ ರಾಜ್ಯದಲ್ಲಿ ಮುಂಗಾರು ಮಳೆಯ ಅಬ್ಬರ ಇನ್ನಷ್ಟು ಹೆಚ್ಚಾಗುವ ಲಕ್ಷಣಗಳಿವೆ. ಅರಬ್ಬಿ ಸಮುದ್ರದಲ್ಲಿ ಮುಂಗಾರಿಗೆ ಪೂರಕ ವಾತಾವರಣ ನಿರ್ಮಾಣವಾಗುತ್ತಿದ್ದು, ಜೂನ್ 12ರವರೆಗೆ ಉತ್ತಮ ಮಳೆಯ ಸಾಧ್ಯತೆ ಗೋಚರಿಸುತ್ತಿದೆ. ಹವಾಮಾನ ಇಲಾಖೆಯು ಜನಸಾಮಾನ್ಯರಿಗೆ ಮುನ್ನೆಚ್ಚರಿಕೆ ಸೂಚಿಸಿದೆ. ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸಾಧ್ಯತೆ ಇರುವುದರಿಂದ ರೈತರು ಮತ್ತು ನಿವಾಸಿಗಳು ಎಚ್ಚರಿಕೆ ವಹಿಸಬೇಕು. ಮೀನುಗಾರರು ಸಮುದ್ರಕ್ಕೆ ಹೋಗುವುದನ್ನು ತಡೆಯುವಂತೆ ಸೂಚಿಸಲಾಗಿದೆ. ಸಂಜೆ ಮತ್ತು ರಾತ್ರಿ ಸಮಯದಲ್ಲಿ ಗುಡುಗು-ಮಿಂಚು ಹೆಚ್ಚಾಗುವುದರಿಂದ ಮರಗಳ ಕೆಳಗೆ ಆಶ್ರಯ ಪಡೆಯುವುದನ್ನು ತಪ್ಪಿಸಿ, ಸುರಕ್ಷಿತ ಸ್ಥಳಗಳಲ್ಲಿ ಇರುವುದು ಉತ್ತಮ.

ಈ ಮುಂಗಾರು ಮಳೆಯು ಕೃಷಿ ಚಟುವಟಿಕೆಗಳಿಗೆ ಒಳ್ಳೆಯದಾಗಿದ್ದರೂ, ಬಿರುಗಾಳಿ ಮತ್ತು ಗುಡುಗು ಮಳೆಯಿಂದಾಗಿ ಜನಜೀವನಕ್ಕೆ ಅಡೆತಡೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಪ್ರತಿಯೊಬ್ಬರೂ ಹವಾಮಾನ ವರದಿಗಳನ್ನು ನಿರಂತರವಾಗಿ ಗಮನಿಸುತ್ತಾ ಜಾಗರೂಕರಾಗಿರುವುದು ಅಗತ್ಯವಾಗಿದೆ. 11 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುವ ನಿರೀಕ್ಷೆ ಇದೆ. ಈ ಹಿನ್ನೆಲೆ ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ಬಾಗಲಕೋಟೆ, ಬೆಳಗಾವಿ, ರಾಯಚೂರು, ಕೊಪ್ಪಳ, ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಈ ಜಿಲ್ಲೆಗಳಲ್ಲಿ ಗುಡುಗು-ಮಿಂಚಿನೊಂದಿಗೆ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸಾಧ್ಯತೆಯೂ ಇದೆ. ಕೃಷಿ ಚಟುವಟಿಕೆಗಳಲ್ಲಿ ತೊಡಗಿರುವ ರೈತರು ಹವಾಮಾನ ಇಲಾಖೆಯ ಮಾಹಿತಿ ಗಮನಿಸಿ ಕ್ರಮ ಕೈಗೊಳ್ಳುವಂತೆ ಸಲಹೆ ನೀಡಲಾಗಿದೆ.

ಕರಾವಳಿ ಭಾಗಗಳಲ್ಲಿ ಸಮುದ್ರದಲ್ಲಿ ಅಲೆಗಳ ಅಬ್ಬರ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಮೀನುಗಾರರು ಹವಾಮಾನ ಇಲಾಖೆಯ ಸೂಚನೆಗಳನ್ನು ಪಾಲಿಸುವಂತೆ ಮನವಿ ಮಾಡಲಾಗಿದೆ.ಹವಾಮಾನ ಇಲಾಖೆಯ ಪ್ರಕಾರ ಉತ್ತರ ಕರ್ನಾಟಕ, ದಕ್ಷಿಣ ಕರ್ನಾಟಕ ಹಾಗೂ ಕರಾವಳಿ ಭಾಗಗಳ ಕೆಲವು ಪ್ರದೇಶಗಳಲ್ಲಿ ಗುಡುಗು-ಮಿಂಚಿನೊಂದಿಗೆ ಆಲಿಕಲ್ಲು ಮಳೆಯಾಗು ಸಾಧ್ಯತೆ ಇದೆ. ಇದರಿಂದ ಕೃಷಿ ಬೆಳೆಗಳಿಗೆ ಹಾನಿಯಾಗುವುದರಿಂದ ರೈತರು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

## ಜಿಲ್ಲೆಯಲ್ಲಿ ಮೇ ಹಾಗೂ ಜೂನ-2026 ನೇ ಮಾಹೆಗೆ ಸಂಬಂಧಿತ ಪಡಿತರ ಆಹಾರ ವಿತರಣೆ

ಗದಗ: ಜೂನ-2026 ನೇ ಮಾಹೆಯಲ್ಲಿ ಜಿಲ್ಲೆಯಲ್ಲಿ ಪಡಿತರ ಆಹಾರ ಧಾನ್ಯವನ್ನು ರಾಜ್ಯ ವ್ಯಾಪ್ತಿಯ ಅನ್ನಭಾಗ್ಯ ವರ್ಗದಡಿ ಮೇ-2026 ಹಾಗೂ ಜೂನ್-2026 ಎರಡೂ ಮಾಹೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿರುವ ಒಟ್ಟು 365 ನ್ಯಾಯಬೆಲೆ ಅಂಗಡಿಗಳ ಮೂಲಕ ಈ ಕೆಳಗೆ ವಿವರಿಸಿದ ಪ್ರಮಾಣದಲ್ಲಿ ಪಡಿತರವನ್ನು ವಿತರಿಸಲಾಗುತ್ತದೆ.

ಪಡಿತರ ಚೀಟಿ ವಿವರ: ಅಂತ್ಯೋದಯ ಪಡಿತರ ಚೀಟಿ (ಪ್ರತಿ ಫಲಾನುಭವಿಗೆ ಏಕ-ಸದಸ್ಯ ದ್ವಿ-ಸದಸ್ಯ ತ್ರಿ-ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಿಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಎಎವೈ ಪಡಿತರ ಚೀಟಿ ಪ್ರತಿ ಫಲಾನುಭವಿಗೆ ಕೇಂದ್ರ NFSA ಹಂಚಿಕೆಯ 35 ಕೆ.ಜಿ.ಅಕ್ಕಿ ಹೊರತುಪಡಿಸಿ) 5.ಕೆ.ಜಿ + 5 ಕೆ.ಜಿ= 10 ಕೆ.ಜಿ ಅಕ್ಕಿಯನ್ನು, ಆದ್ಯತಾ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ) ರಾಜ್ಯ ಮತ್ತು ಕೇಂದ್ರ ವರ್ಗದಡಿಯ ಪಡಿತರ ಕಾರ್ಡುಗಳಿಗೆ) 5.ಕೆ.ಜಿ + 5 ಕೆ.ಜಿ= 10 ಕೆ.ಜಿ ಅಕ್ಕಿಯನ್ನು ಫಲಾನುಭವಿಗಳಿಗೆ ವಿತರಿಸಲಾಗುವುದು. ಜೂನ-2026ನೇ ಮಾಹೆಯಲ್ಲಿ ರಾಜ್ಯ ವ್ಯಾಪ್ತಿ ಅನ್ನಭಾಗ್ಯ ಯೋಜನೆಯಡಿ ಮೇ ಮತ್ತು ಜೂನ್-2026 ಎರಡೂ ಮಾಹೆಗಳ ಪಡಿತರ ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದ್ದು, ಎಲ್ಲ ಅರ್ಹ ಫಲಾನುಭವಿಗಳು ತಮ್ಮ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳಲ್ಲಿ ಬೆರಳಚ್ಚು ನೀಡಿ ಉಚಿತ ಪಡಿತರವನ್ನು ಪಡೆಯಬೇಕು ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ : ಅರ್ಜಿ ಆಹ್ವಾನ

ಕೊಪ್ಪಳ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ "ಪೂರ್ಣಾವಧಿ/ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ/ ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ 'ಸೇವಾಸಿಂಧು" ಪೋರ್ಟಲ್ https://sevasindhu.karnataka.gov.in ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ. ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು" ಪೋರ್ಟಲ್ ಮೂಲಕ ಜೂನ್ 20ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಗದಗ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಕೇಂದ್ರ ಹಾಗೂ ಗದಗ ಜಿಲ್ಲೆಯಲ್ಲಿ ವಿವಿಧ ಕ್ರೀಡೆಗಳಲ್ಲಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳ ಅಧಿಕೃತ ಮಾಹಿತಿ ಸಂಗ್ರಹಿಸಬೇಕಾಗಿರುವುದು ಅವಶ್ಯಕವಾಗಿರುತ್ತದೆ. ಅದರಂತೆ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿ, ಗದಗ ಇಲ್ಲಿ ನಿಗಧಿತ ನಮೂನೆಯಲ್ಲಿ ಅರ್ಜಿ ಪಡೆದು ಜೂನ್ 15 ರೊಳಗಾಗಿ ಅರ್ಜಿ ನಮೂನೆಗೆ ಪಾಸ್ಪೋರ್ಟ ಅಳತೆಯ ಭಾವಚಿತ್ರ ಲಗತ್ತಿಸಿ ಹಾಗೂ ಪ್ರಶಸ್ತಿ ಪತ್ರಗಳ ಜೊತೆ ಮಾಹಿತಿ ಭರ್ತಿ ಮಾಡಿ ಕಛೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ ಇಲ್ಲಿ ಮಂಜುನಾಥ್ ಬಾಗಡೆ, ಹಾಕಿ ತರಬೇತುದಾರರು ದೂರವಾಣಿ ಸಂಖ್ಯೆ : 9036533909, ಶ್ರೀಮತಿ ವಿದ್ಯಾ ಕುಲಕರ್ಣಿ, ಸೈಕ್ಲಿಂಗ್ ತರಬೇತುದಾರರು, ದೂರವಾಣಿ ಸಂಖ್ಯೆ: 8951936636 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಜಿಲ್ಲಾಧಿಕಾರಿಗಳಿಂದ ಪತ್ರಿಕಾಗೋಷ್ಠಿ

## ಮತದಾರರ ಪಟ್ಟಿ ಪರಿಷ್ಕರಣೆಯ ಗಣತಿದಾರರಿಗೆ ಸಹಕರಿಸಲು ಜಿಲ್ಲಾಧಿಕಾರಿಗಳ ಮನವಿ

ಕೊಪ್ಪಳ: ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಹಿನ್ನೆಲೆಯಲ್ಲಿ 2026ರ ಜೂನ್ 30 ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ ನೀಡಲಿರುವ ಗಣತಿದಾರರಿಗೆ ಅಗತ್ಯ ಮಾಹಿತಿ ನೀಡಿ ಸಹಕಾರ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಕೊಪ್ಪಳ ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದ ಬಗ್ಗೆ ಕೊಪ್ಪಳ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜೂನ್ 04ರಂದು ನಡೆದ ಸಂವಾದ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ಮತದಾರರು ಬಿಟ್ಟು ಹೋಗಬಾರದು ಎಂಬುದೇ ಈ ಮತದಾರರ ಪಟ್ಟಿ ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ ಎಂಬುದಾಗಿ ಭಾರತ ಚುನಾವಣಾ ಆಯೋಗವು ಸ್ಪಷ್ಟಪಡಿಸಿದೆ ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು. ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬಿಎಲ್ ಎಗಳು ಸಹ ಭಾಗಿಯಾಗುತ್ತಾರೆ. ಅವರಿಗೂ ಸಹ ಜನತೆ ಸಹಕಾರ ನೀಡಬೇಕು



ಎಂದು ಕೋರಿದರು.

ಉದ್ದೇಶ ಪೂರ್ವಕವಾಗಿಯೇ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಾಗುತ್ತದೆ ಎಂದು ಯಾರಿಂದಲೂ ದೂರುಗಳು ಬರಬಾರದು ಎಂದು ಈ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಂದ ನೇಮಕಗೊಂಡ ಬಿಎಲ್ ಇ ಗಳು ಸಹ ಭಾಗಿಯಾಗಿ ಅವರಿಂದ ಸಲಹೆ ಸೂಚನೆಗೆ ಅವಕಾಶ ಕಲ್ಪಿಸಲಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಪಂ ಉಪ ಕಾರ್ಯದರ್ಶಿ ಟಿ ಕೃಷ್ಣಮೂರ್ತಿ ಇದ್ದರು.

## ಸಾರ್ವಜನಿಕರ ಗಮನಕ್ಕೆ

ಗದಗ: ಪಟ್ಟಣ ಪಂಚಾಯತ ಮುಳಗುಂದ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) 2.0 ವಸತಿ ರಹಿತ ಹಾಗೂ ನಿವೇಶನ ರಹಿತ ಕುಟುಂಬಗಳಿಗೆ ಅರ್ಜಿ ಆಹ್ವಾನಿಸಿದ್ದು, ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ ಯೋಜನೆಯಡಿ ವಸತಿ ರಹಿತ (ಕಚ್ಚಾಮನೆ ಹೊಂದಿರುವ) ಮತ್ತು ನಿವೇಶನ ರಹಿತ ಕುಟುಂಬಗಳೀಗೆ ವಸತಿ ಸೌಲಭ್ಯ ಕಲ್ಪಿಸಲು Unified Web Portal ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ ವ್ಯಾಪ್ತಿಯೊಳಗೆ ಬರುವ ಎಲ್ಲಾ ವಾರ್ಡಗಳಲ್ಲಿ ಎಲ್ಲಾ ವಸತಿ ರಹಿತ (ಕಚ್ಚಾಮನೆ ಹೊಂದಿರುವ) ಮತ್ತು ನಿವೇಶನ ರಹಿತ ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ http://pmay.urban.gov.in ನಲ್ಲಿ ಅರ್ಜಿ ಸಲ್ಲಿಸಲು ಅವಕಾಸ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯಲಯದ ವಸತಿ ವಿಭಾಗದ ಶಾಖೆಯಲ್ಲಿ ಸಂಪರ್ಕಿಸಬಹುದು ಎಂದು ಮುಳಗುಂದ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಜಾಗೃತಿ ಕಾರ್ಯಕ್ರಮ

ಗದಗ: ಪ್ರತಿ ವರ್ಷದಂತೆ ಈ ವರ್ಷ ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು "ಆಕರ್ಷಣೆಯನ್ನು ಬಹಿರಂಗಪಡಿಸುವುದು – ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದುರಿಸುವುದು" ಎಂಬ ಘೋಷಣೆಯೊಂದಿಗೆ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ , ಜಿಲ್ಲಾ ಪೊಲೀಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಗದಗ, ಇಂಡಿಯನ್ ಕ್ಯಾನ್ಸ್ರ ಸೊಸೈಟಿ, ಜಿಲ್ಲಾ ಎನ್.ಸಿ.ಟಿ ಘಟಕ ಗದಗ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 3 ರಂದು ಜಿಲ್ಲಾ ಎಸ್.ವಿ.ಟಿ ಪ್ಯಾರ್ ಮೇಡಿಕಲ್ ಕಾಲೇಜನಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್.ಶಿವನಗೌಡ್ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ತಂಬಾಕು ವ್ಯಸನದ ದುಷ್ಟಟಗಳಿಂದ ಉಂಟಾಗುವ ದುಷ್ಪರಿಣಾಮಗಳು ರೋಗಗಳು ಸಾವುಗಳನ್ನು ನಿಯಂತ್ರಿಸಲು ಹೆಚ್ಚು ಹೆಚ್ಚು ಜಾಗೃತಿ ಕಾರ್ಯಕ್ರಮಗಳ ಹಮ್ಮಿಕೊಳ್ಳುವುದು ಅವಶ್ಯವಿದ್ದು ನಮ್ಮ ಯುವ ಪೀಳಿಗೆ ಸಂಪೂರ್ಣ ತಂಬಾಕು ಮುಕ್ತ ಯುವ ಪೀಳಿಗೆ ಮಾಡಲು ಪ್ರಸುತ್ತ ಶಾಲಾ/ ಕಾಲೇಜುಗಳಲ್ಲಿ ತಂಬಾಕು ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವುದರ ಮೂಲಕ ಸಾಧ್ಯ ಹಾಗೂ ತಂಬಾಕು ನಿಯಂತ್ರಣ ಕಾಯ್ದೆ (ಕೋಟ್ಪಾ-2003) ಇನ್ನಷ್ಟು ಪರಿಣಾಮಕಾರಿಯಾಗಿ ಕೆಲವೊಂದು ತಿದ್ದುಪಡಿ ಅವಶ್ಯಕತೆ ಇದೆ. ತಂಬಾಕು ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈಜೋಡಿಸಲು ಕರೆ ನೀಡಿದರು. ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರೀತ್ ಖೋನಾ ಅವರು ಮಾತನಾಡುತ್ತಾ ಈ ವರ್ಷ ಘೋಷವ್ಯಾಕ್ಕೆ ಆಕರ್ಷಣೆಯನ್ನು ಬಹಿರಂಗಪಡಿಸುವುದು – ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದುರಿಸುವುದು" ಅಂದರೆ ತಂಬಾಕು ಉತ್ಪನ್ನಗಳ ಆಕರ್ಷಕ ಪ್ಯಾಕ್‌ಜಿಂಗ, ವಿವಿಧ ಬಣ್ಣ ಮತ್ತು ಸುವಾಸನೆ, ಫ್ಲೇವರ್ ಹಾಗೂ ಡಿಜಿಟಲ್ ಮಾರ್ಕೆಟ್ ಮೂಲಕ ಉತ್ಪನ್ನಗಳ ಫ್ಯಾಸನ್‌ಯಾಗಿ ಮಾಡಿ ಹೆಚ್ಚಿನ ಸಂಖ್ಯೆಯಲ್ಲಿ ವ್ಯಸನಗಳಿಯಾಗುವಂತೆ ಮಾಡಲಾಗುತ್ತಿದೆ, ಹಾಗೂ ತಂಬಾಕು ಮತ್ತು ನಿಕೋಟನ್ ವ್ಯಸನಿಗಳಿಗೆ ತಂಬಾಕು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಹಾಗೂ ವ್ಯಸನ ತ್ಯಜಿಸುವ ಸಹಾಯವಾಣಿಗಳ ಮೂಲಕ ತಂಬಾಕು ವ್ಯಸನದಿಂದ ಹೊರಬರಲು ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ತಂಬಾಕು ವ್ಯಸನದಿಂದ ಆರೋಗ್ಯದ ಮೇಲೆ ಬಹಳಷ್ಟು ದುಷ್ಪರಿಣಾಮಗಳ ಉಂಟಾಗುತ್ತವೆ. ಉದಾಹರಣೆ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಹಾಗೂ ತಂಬಾಕಿನಲ್ಲಿನ ನಿಕೋಟಿನ್ ಅಂಶ ರಕ್ತನಾಳಗಳಲ್ಲಿ ಸೇರಿ ದೇಹದ ಪ್ರತಿಯೊಂದು ಅಂಗದ ಮೇಲೆ ಪರಿಣಾಮ ಬಿರುತ್ತದೆ, ಈ ಕುರಿತು ನಿರಂತರ ಜಾಗೃತಿ ಕಾರ್ಯಕ್ರಮ, ತರಬೇತಿ ಕಾರ್ಯಕ್ರಮ, ಕೋಟ್ಪಾ ದಾಳಿ ಹಮ್ಮಿಕೊಳ್ಳಲಾಗಿದೆ, ತಂಬಾಕು ವ್ಯಸನಿಗಳಿಗೆ ನಮ್ಮ ಜಿಲ್ಲೆಯಲ್ಲಿ ಜಿಲ್ಲಾ ಆಸ್ಪತ್ರೆಯ ರೂ.ನಂ 189 ರಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರ ಲಭ್ಯವಿದ್ದು, ಈ ಕೇಂದ್ರದಲ್ಲಿ ಉಚಿತ ಆಪ್ತ ಸಮಾಲೋಚನೆ ಔಷಧೋಪಚಾರ ಸೇವೆ ನೀಡಲಾಗುತ್ತಿದೆ ಎಂದು ತಿಳಿಸಿದರು.




ಉಪ ಪೊಲೀಸ ವರಿಷ್ಠಾಧಿಕಾರಿ ಎಂ.ಐ ಸಜ್ಜನವರ ಕೋಟ್ಪಾ ಕಾಯ್ದೆ ಕುರಿತು ಮಾತನಾಡುತ್ತ ಶಾಲಾ ಸುತ್ತ-ಮುತ್ತ 100 ಗಜದವರೆಗೆ ತಂಬಾಕು ಮಾರಾಟ ಕಂಡುಬಂದಲ್ಲಿ ಹಾಗೂ ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ 112 ಗೆ ಕರೆ ಮಾಡಿದರೆ ತಕ್ಷಣ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ನಂತರ ಡ್ರಗ್ ಫ್ರೀ ಆ?ಯಪ್ ಮೂಲಕ ಕಾನೂನು ಬಾಹಿರ ಮಾದಕ ದ್ರವ್ಯಗಳ ಬಳಕೆ ಸಂಗ್ರಹಣೆ ಉತ್ಪಾದನೆ ಬೆಳೆ ಕಂಡುಬಂದಲ್ಲಿ ದೂರು ನೀಡಬಹುದ್ದಾಗಿ ತಿಳಿಸಿದರು.

ವಿನಯ ಕುಬಸದ್ ಪ್ರಾಚಾರ್ಯರು ಎಸ್.ವಿ.ಟಿ.ಪ್ಯಾರ್ ಮೇಡಿಕಲ್ ಕಾಲೇಜು ಗದಗ ಇವರು ಮಾತನಾಡಿ ಈ ರೀತಿಯ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಅವಶ್ಯಕವಿದ್ದು ಈ ಮಾಹಿತಿಯನ್ನು ನಮ್ಮ ಕುಟುಂಬ, ಸೇಹ್ನಿತರಿಗೆ ಸಮುದಾಯದಲ್ಲಿ ಹಂಚಿಕೊಳ್ಳವುದರ ಮೂಲಕ ಇನ್ನು ಹೆಚ್ಚಿನ ಜಾಗೃತಿ ಮೂಡಿಸಲು ಅನುಕೂಲಕರವಾಗುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾಣ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಗೋಪಾಲಾ ಸುರಪುರ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಶ್ರೀಮತಿ ಬಸಮ್ಮ ಚಿತ್ತರಗಿ ಗದಗ, ಶ್ರೀಮತಿ ರೇಷ್ಮಾ ಎನ್ ನದಾಫ್ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗ, ಪಪಾಮತಿ ಇಂಡಿಯನ್ ಕ್ಯಾನ್ಸ್ರ ಸೊಸೈಟಿ ಗದಗ, ವಿರೇಶ ಮದಕಟ್ಟಿ ಐ.ಡಿ.ಎಸ್.ಪಿ ಡಾಟಾ ಮಾನ್ಯಜರ್ ಶಿವಕುಮಾರ ಬಗಾಡೆ, ಹಾಗೂ ಎಸ್.ವಿ.ಟಿ ಪ್ಯಾರ್ ಮೇಡಿಕಲ್ ಕಾಲೇಜಿನ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಎಂ. ರಬ್ಬನಗೌಡ ಹಿ.ಆ.ನಿ ಅಧಿಕಾರಿಗಳು ಗದಗ ನಿರೂಪಿಸಿದರು.

## ದೆಹಲಿಯಲ್ಲಿ ಹೈಕಮಾಂಡ್ ಜೊತೆ ಸಿದ್ದರಾಮಯ್ಯ-ಡಿಕೆಶಿ ಚರ್ಚೆ



ನವದೆಹಲಿ: ರಾಜ್ಯದ ನೂತನ ಸಚಿವ ಸಂಪುಟ ರಚನೆ ಮತ್ತು ಸಚಿವರ ಆಯ್ಕೆ ಕುರಿತಂತೆ ಮಾಜಿ ಮುಖ್ಯಮಂತ್ರಿ ಖುಜಜಚಿಡಿಔಚಿ-ಟಚಿಚಿಢ ಹಾಗೂ ನಿಯೋಜಿತ ಮುಖ್ಯಮಂತ್ರಿ ಆ. ಏ. ಖುಶಿತಚಿ-ಇಣಟಚಿಡಿ ಅವರು ದೆಹಲಿಯಲ್ಲಿ ಮಹತ್ವದ ಸಭೆ ನಡೆಸಿದರು.

ಈ ವೇಳೆ ಎಸಿಸಿ ಅಧ್ಯಕ್ಷ ಒಚಿಟಟಜಇಚಿಡಿರಿಣಟಿ ಮುಚಿಡಿಂಜ ಮತ್ತು ಕಾಂಗ್ರೆಸ್ ನಾಯಕ Rahul Gandhi ಅವರೊಂದಿಗೆ ಸಚಿವ ಸಂಪುಟದ ಸಂಭಾವ್ಯ ಸದಸ್ಯರ ಆಯ್ಕೆ, ಪ್ರಾದೇಶಿಕ ಹಾಗೂ ಸಾಮಾಜಿಕ ಸಮತೋಲನ ಸೇರಿದಂತೆ ವಿವಿಧ ರಾಜಕೀಯ ವಿಚಾರಗಳ ಕುರಿತು ಸಮಾಲೋಚನೆ ನಡೆಸಲಾಯಿತು. ರಾಜ್ಯ ಸಚಿವ ಸಂಪುಟದಲ್ಲಿ ಯಾರಿಗೆ ಅವಕಾಶ ನೀಡಬೇಕು, ವಿವಿಧ ಸಮುದಾಯಗಳು ಮತ್ತು ಜಿಲ್ಲೆಗಳಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವುದು ಸೇರಿದಂತೆ ಹಲವು ವಿಷಯಗಳು ಸಭೆಯಲ್ಲಿ ಚರ್ಚೆಗೆ ಬಂದಿರುವುದಾಗಿ ತಿಳಿದುಬಂದಿದೆ. ಸಭೆಯ ಬಳಿಕ ಸಚಿವ ಸಂಪುಟದ ಅಂತಿಮ ಪಟ್ಟಿಗೆ ಕೇಂದ್ರ ನಾಯಕತ್ವದ ಒಪ್ಪಿಗೆ ಪಡೆಯುವ ಪ್ರಕ್ರಿಯೆ ಮುಂದುವರಿದಿದ್ದು, ಶೀಘ್ರದಲ್ಲೇ ಸಚಿವರ ಹೆಸರುಗಳನ್ನು ಅಧಿಕೃತವಾಗಿ ಪ್ರಕಟಿಸುವ ಸಾಧ್ಯತೆ ಇದೆ.

## ಸರಕಾರಿ ಆಸ್ಪತ್ರೆಯ ಮಹಿಳಾ ಶೌಚಾಲಯದಲ್ಲಿ ಕ್ಯಾಮೆರಾ ಇಟ್ಟು ವಿಡಿಯೋ ಮಾಡುತ್ತಿದ್ದ ಕಿಡಿಗೇಡಿಗೆ ಧರ್ಮದೇಟು



ಹಾರೋಹಳ್ಳಿ: ಸರಕಾರಿ ಆಸ್ಪತ್ರೆಯ ಮಹಿಳಾ ಶೌಚಾಲಯದಲ್ಲಿ ಕ್ಯಾಮೆರಾ ಇಟ್ಟು ವಿಡಿಯೋ ಚಿತ್ರೀಕರಿಸುತ್ತಿದ್ದ ಸಿಬ್ಬಂದಿ ಇದೀಗ ಪೊಲೀಸರ ಅತಿಥಿಯಾಗಿದ್ದಾನೆ. ಸಿಕ್ಕಿಬಿದ್ದ ಯುವಕ ಅದೇ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ. ಆತನಿಗೆ ಗ್ರಾಮಸ್ಥರು ಧರ್ಮದೇಟು ನೀಡಿ ಪೊಲೀಸರಿಗೆ ಒಪ್ಪಿಸಿದ್ದಾರೆ.

ಹಾರೋಹಳ್ಳಿ ತಾಲೂಕಿನ ತೋಕಸಂದ್ರ ಗ್ರಾಮದ ಸರಕಾರಿ ಆಸ್ಪತ್ರೆಯ ಕಥೆ ಇದಾಗಿದ್ದು, ಕ್ಯಾಮೆರಾ ಇಟ್ಟು ಸಿಕ್ಕಿಬಿದ್ದ ಸಿಬ್ಬಂದಿ ತೋಕಸಂದ್ರ ಗ್ರಾಮದ ಸುನೀಲ್(ಶ್ರೀಧರ್) ಎಂದು ಗುರುತಿಸಲಾಗಿದೆ.ಈತ ಕಳೆದ 5 ವರ್ಷದಿಂದಲೂ ಇದೇ ಆಸ್ಪತ್ರೆಯಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದಾನೆ.

**ಏನಿದು ಘಟನೆ :**

ತೋಕಸಂದ್ರ ಸರಕಾರಿ ಆಸ್ಪತ್ರೆಗೆ ಮಹಿಳೆಯೊಬ್ಬರು ಅನಾರೋಗ್ಯದಿಂದ ಬಂದಿದ್ದಾರೆ ಈ ವೇಳೆ ಅಲ್ಲಿಯೇ ಕರ್ತವ್ಯ ನಿರ್ವಹಿಸುತ್ತಿದ್ದ ಸುನೀಲ್(ಶ್ರೀಧರ್) ಮಹಿಳೆಗೆ ಮೂತ್ರ ಪರೀಕ್ಷೆಗಾಗಿ ಮೂತ್ರ ನೀಡುವಂತೆ ಹೇಳಿದ್ದಾನೆ. ಈ ವೇಳೆ ಶೌಚಕ್ಕೆ ತೆರಳಿದ ಮಹಿಳೆ ನೀರು ಬರುತ್ತಿಲ್ಲ ಎಂದು ಸುಲೀಲ್ ಬಳಿ ಹೇಳಿದ್ದಾರೆ. ಪರೀಕ್ಷಿಸುತ್ತೇನೆ ಎಂದು ಒಳಹೋದ ಸುನೀಲ್(ಶ್ರೀಧರ್) ನೀರು ಬರುತ್ತಿದೆ ಎಂದು ಮಹಿಳೆಯನ್ನು ಪುನಃ ಶೌಚದ ಒಳಗೆ ಕಳುಹಿಸಿದ್ದಾನೆ. ಒಳಹೋದ ಮಹಿಳೆಗೆ ಕಪ್ಪು ಬಣ್ಣದ ಚಿಕ್ಕ ವಸ್ತುವೊಂದು ಕಂಡಿದ್ದು ಅನುಮಾನಗೊಂಡ ಮಹಿಳೆ ತನ್ನ ಪತಿಗೆ ತಿಳಿಸಿದ್ದಾರೆ. ಶೌಚಕ್ಕೆ ಓಡೋಡಿ ಹೋದ ಮಹಿಳೆಯ ಪತಿ, ಇದೇನಿದು ಎಂದು ಪ್ರಶ್ನಿಸಿದ್ದಾರೆ. ಈ ವೇಳೆ ಸುನೀಲ್(ಶ್ರೀಧರ್) ಕ್ಯಾಮೆರಾವನ್ನು ಸ್ಥಳದಲ್ಲಿಯೇ ಹೊಡೆದುಹಾಕಿದ್ದಾನೆ. ಇದರಿಂದ ಕುಪಿತಗೊಂಡ ಸ್ಥಳೀಯರು ಸುನೀಲ್‌ಗೆ ಧರ್ಮದೇಟು ನೀಡಿ ನಂತರ ಪೊಲೀಸರಿಗೆ ಒಪ್ಪಿಸಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಆತನನ್ನು ವಶಕ್ಕೆ ತೆಗೆದುಕೊಂಡಿದ್ದಾರೆ. ಈ ಸಂಬಧ ಹಾರೋಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪೊಲೀಸರು ತನಿಖೆ ಕೈಗೊಂಡಿದ್ದು ತನಿಖೆಯ ನಂತರವಷ್ಟೇ ಸತ್ಯಾಸತ್ಯತೆ ಹೊರಬರಬೇಕಿದೆ.

## ಉಪ ಮುಖ್ಯಮಂತ್ರಿ ಸ್ಥಾನ ಕೊಟ್ಟರೂ ನಿಭಾಯಿಸಲು ಸಿದ್ಧ : ಯು.ಟಿ. ಖಾದರ್



ಬೆಂಗಳೂರು: ಇದುವರೆಗೆ ಸಂಪುಟ ಸೇರ್ಪಡೆ ಬಗ್ಗೆ ಅಧಿಕೃತ ಮಾಹಿತಿ ಬಂದಿಲ್ಲ. ಒಂದು ವೇಳೆ ಉಪ ಮುಖ್ಯಮಂತ್ರಿ ಸ್ಥಾನ ಕೊಟ್ಟರೂ ನಿಭಾಯಿಸಲು ಸಿದ್ಧ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಬಾಲು ಬಂದರೂ ಬ್ಯಾಟಿಂಗ್ ಮಾಡುತ್ತೇನೆ.ಯಾವ ಖಾತೆ ಕೊಟ್ಟರೂ ನಿಭಾಯಿಸುತ್ತೇನೆ ಎಂದು ಅವರು ತಿಳಿಸಿದರು. ನಾನು ಇನ್ನೂ ಸ್ಪೀಕರ್ ಆಗಿಯೇ ಇದ್ದು, ಸಚಿವ ಸ್ಥಾನ ನೀಡುವ ಬಗ್ಗೆ ಇನ್ನೂ ಅಧಿಕೃತ ಮಾಹಿತಿ ಬಂದಿಲ್ಲ ಎಂದ ಅವರು, ಮೂರು ವರ್ಷಗಳಲ್ಲಿ ವಿಧಾನಸಭೆಯಲ್ಲಿ ಹಲವು ಕೆಲಸ ಮಾಡಿದ್ದೇವೆ. ಇಂದು ಮಧ್ಯಾಹ್ನ 3.30ರ ಒಳಗಾಗಿ ಕಾಂಗ್ರೆಸ್ ಪಕ್ಷದಿಂದ ಅಧಿಕೃತ ಮಾಹಿತಿ ಬರುವ ನಿರೀಕ್ಷೆ ಇದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಇನ್ನುಮುಂದೆ ಶಾಲಾ ಆವರಣಗಳಲ್ಲಿ ಸಿನಿಮಾ, ಧಾರಾವಾಹಿ, ಜಾಹೀರಾತು ಚಿತ್ರೀಕರಣಕ್ಕೆ ನಿಷೇಧ

ಬೆಂಗಳೂರು: ರಾಜ್ಯದ ಸರ್ಕಾರಿ ಶಾಲಾ ಆವರಣಗಳಲ್ಲಿ ಇನ್ನು ಮುಂದೆ ಯಾವುದೇ ರೀತಿಯ ವಾಣಿಜ್ಯ ಚಿತ್ರೀಕರಣಕ್ಕೆ ಅವಕಾಶವಿರುವುದಿಲ್ಲ. ಚಲನಚಿತ್ರ, ಧಾರಾವಾಹಿ, ಜಾಹೀರಾತು ಸೇರಿದಂತೆ ಎಲ್ಲಾ ಬಗೆಯ ಶೂಟಿಂಗ್‌ಗಳನ್ನು ಸಂಪೂರ್ಣವಾಗಿ ನಿಷೇಧಿಸಿ ಶಾಲಾ ಶಿಕ್ಷಣ ಇಲಾಖೆ ಅಧಿಕೃತ ಸುತ್ತೋಲೆ ಹೊರಡಿಸಿದೆ.

ಮಕ್ಕಳ ಪಾಠ-ಪ್ರವಚನಗಳಿಗೆ ಅನಗತ್ಯ ಅಡಚಣೆ ಉಂಟಾಗಬಾರದು ಎಂಬ ಕಾರಣ-ಕ್ಕೆ ಈ ನಿರ್ಣಾಯಕ ನಿರ್ಧಾರ ಕೈಗೊಳ್ಳಲಾಗಿದೆ. ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ವಿಕಾಸ್ ಕಿಶೋರ್ ಸೂರಳ್ಕರ್ ಅವರು ಈ ಕುರಿತು ಅಧಿಕೃತ ಸುತ್ತೋಲೆ ಹೊರಡಿಸಿದ್ದಾರೆ. ಶಾಲಾ ಅವಧಿಯಲ್ಲಿ ಚಿತ್ರೀಕರಣ ನಡೆಸುವುದರಿಂದ ಮಕ್ಕಳ ಪಾಠ-ಪ್ರವಚನಗಳಿಗೆ ಭಾರಿ ಅಡಚಣೆಯಾಗುತ್ತದೆ. ಅಲ್ಲದೆ, ವಿದ್ಯಾರ್ಥಿಗಳ ಮನಸ್ಸಿನ ಮೇಲೆ ಒತ್ತಡ ಉಂಟುಮಾಡಿ, ಅವರ ಕಲಿಕಾ ಸಾಮರ್ಥ್ಯದ ಮೇಲೆ ನಕಾರಾತಕ ಪರಿಣಾಮ ಬೀರಬಹುದು ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.



ಮಕ್ಕಳ ಸುರಕ್ಷತೆ ಹಾಗೂ ಅವರ ಖಾಸಗಿತನವನ್ನು ಕಾಪಾಡುವುದು ಶಾಲಾ ಮುಖ್ಯಸ್ಥರ ಪ್ರಮುಖ ಜವಾಬ್ದಾರಿಯಾಗಿದೆ. ಅನೇಕ ಪೋಷಕರು ತಮ್ಮ ಮಕ್ಕಳ ಫೋಟೋ ಅಥವಾ ವಿಡಿಯೋಗಳನ್ನು ಮಾಧ್ಯಮಗಳಲ್ಲಿ ಪ್ರದರ್ಶಿಸಲು ಒಪ್ಪುವುದಿಲ್ಲ ಎಂಬ ಪ್ರಮುಖ ಅಂಶವನ್ನೂ ಇಲಾಖೆ ಈ ಸುತ್ತೋಲೆಯಲ್ಲಿ ಉಲ್ಲೇಖಿಸಿದೆ. ಚಿತ್ರೀಕರಣದ ವೇಳೆ ವಿದ್ಯಾರ್ಥಿಗಳು ಅನಗತ್ಯವಾಗಿ ಕ್ಯಾಮೆರಾಗಳಿಗೆ ಸೆರೆಯಾಗುವ ಸಾಧ್ಯತೆಯಿದ್ದು, ಇದು ಅವರ ಗೌಪ್ಯತೆಗೆ ಧಕ್ಕೆ ತರಬಹುದು ಎಂದು ಆದೇಶದಲ್ಲಿ ಎಚ್ಚರಿಸಲಾಗಿದೆ.

**ಯಾವ ಶಾಲೆಗಳಿಗೆ ಅನ್ವಯ? :**

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಿಗೆ ಈ ಆದೇಶ ಅನ್ವಯವಾಗಲಿದೆ. ಇದುವರೆಗೆ ಕೆಲವು ಶಾಲೆಗಳಲ್ಲಿ ಖಾಸಗಿ ಹಾಗೂ ಶೈಕ್ಷಣಿಕೇತರ ಕಾರ್ಯಕ್ರಮಗಳನ್ನು ನಡೆಸುವುದನ್ನು ನಿಷೇಧಿಸಲಾಗಿತ್ತು. ಆದರೆ ಇದೀಗ ಚಿತ್ರೀಕರಣಕ್ಕೂ ಸಂಪೂರ್ಣ ಬ್ರೇಕ್ ಹಾಕಲಾಗಿದೆ. ರಾಜ್ಯದ ಎಲ್ಲಾ ಶಾಲೆಗಳಲ್ಲಿ ವಾರ್ಷಿಕ ಶೈಕ್ಷಣಿಕ ಕ್ರಿಯಾ ಯೋಜನೆಯನ್ನು ಏಕರೂಪದಲ್ಲಿ ಜಾ-ರಿಗೊಳಿಸಲಾಗುತ್ತಿದೆ. ಈ ನಿಗದಿತ ವೇಳಾಪಟ್ಟಿಯಲ್ಲಿ ಶೈಕ್ಷಣಿಕೇತರ ಮನರಂಜನಾ ಚಟುವಟಿ-ಕೆಗಳಿಗೆ ಯಾವುದೇ ಅವಕಾಶವಿಲ್ಲ. ಶಾಲೆಗಳನ್ನು ಕೇವಲ ಜ್ಞಾನಾರ್ಜನೆಯ ಪವಿತ್ರ ಕೇಂದ್ರಗಳನ್ನಾಗಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಈ ನಿಯಮವನ್ನು ತರಲಾಗಿದೆ.

**ಕಟ್ಟುನಿಟ್ಟಿನ ಜಾರಿ :**

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸೂಚಿಸಲಾಗಿದೆ. ನಿಯಮ ಉಲ್ಲಂಘಿಸುವ ಶಾಲಾ ಮುಖ್ಯಸ್ಥರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಎಚ್ಚರಿಕೆ ನೀಡಲಾಗಿದೆ.

**ಹಿನ್ನೆಲೆ ಏನು ? :**

ಈ ಹಿಂದೆ ರಾಜ್ಯದ ಕೆಲವು ಸರ್ಕಾರಿ ಶಾಲೆಗಳಲ್ಲಿ ಸಿನಿಮಾ ಮತ್ತು ಧಾರಾವಾಹಿಗಳ ಚಿತ್ರೀಕರಣ ನಡೆದ ಘಟನೆಗಳು ವರದಿಯಾಗಿದ್ದವು. ಶೂಟಿಂಗ್ ವೇಳೆ ಮಕ್ಕಳನ್ನು ಬಳಸಿಕೊಳ್ಳುವುದು, ಪಾಠದ ಸಮಯದಲ್ಲಿ ಕ್ಯಾಮೆರಾ ತಂಡಗಳು ಶಾಲೆಯಲ್ಲಿಯೇ ಇರುವುದು ಸೇರಿದಂತೆ ಹಲವು ಅಂಶಗಳು ಶಿಕ್ಷಣ ತಜ್ಞರು ಮತ್ತು ಪೋಷಕರ ಆಕ್ಷೇಪಕ್ಕೆ ಗುರಿಯಾಗಿದ್ದವು. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆ ಈಗ ಕಠಿಣ ನಿಲುವು ತಳೆದಿದೆ.

# ಕರ್ನಾಟಕದಲ್ಲಿ ಪೂರ್ಣಾವಧಿಯ ಆಡಳಿತ ನಡೆಸಿದ್ದು ಕೇವಲ ಮೂವರು ಮುಖ್ಯಮಂತ್ರಿಗಳು ಮಾತ್ರ

ಬೆಂಗಳೂರು: ಕರ್ನಾಟಕ ರಾಜಕೀಯವು ಅಸ್ಥಿರತೆಗೆ ಹೆಸರಾದುದು. 1956ರಲ್ಲಿ ಮೈಸೂರು ರಾಜ್ಯದ ಏಕೀಕರಣದಿಂದ ಇಂದಿನವರೆಗೆ ಕರ್ನಾಟಕದಲ್ಲಿ ಕೇವಲ ಮೂವರು ಮುಖ್ಯಮಂತ್ರಿಗಳು ಮಾತ್ರ ಪೂರ್ಣಾವಧಿಯ ಆಡಳಿತ ನಡೆಸಿದ್ದಾರೆ.

ಉಳಿದವರೆಲ್ಲರೂ ರಾಜಕೀಯ ಬಂಡಾಯ, ಬಹುಮತ ಕಳೆದುಕೊಳ್ಳುವಿಕೆ, ಹೈಕಮಾಂಡ್ ನಿರ್ಧಾರ ಅಥವಾ ಇತರ ಕಾರಣಗಳಿಂದ ಅಲ್ಪಾವಧಿಯಲ್ಲೇ ಅಧಿಕಾರ ತ್ಯಜಿಸಬೇಕಾಗಿದೆ.

ಕರ್ನಾಟಕದಲ್ಲಿ ಪಕ್ಷಾಂತರ, ಬಹುಮತದ ಆಟ ಮತ್ತು ಹೈಕಮಾಂಡ್‌ನ ಮಧ್ಯಪ್ರವೇಶವು ಸ್ಥಿರ ಆಡಳಿತಕ್ಕೆ ಅಡ್ಡಿಯಾಗಿದೆ. ಸಿದ್ದರಾಮಯ್ಯ ಅವರು ಎರಡನೇ ಬಾರಿ ಸಿಎಂ ಆಗಿ ಕೇವಲ 3 ವರ್ಷಗಳಲ್ಲಿ ಪದತ್ಯಾಗ ಮಾಡಿದ್ದು ಇದಕ್ಕೆ ಉದಾಹರಣೆಯಾಗಿದೆ. ಕರ್ನಾಟಕದ ಜನರು ಸ್ಥಿರ ಮತ್ತು ದೀರ್ಘಕಾಲೀನ ಆಡಳಿತವನ್ನು ಬಯಸುತ್ತಾರೆ. ಆದರೆ ರಾಜಕೀಯ ಪಕ್ಷಗಳಲ್ಲಿ ಒಳಜಗಳ, ಬಂಡಾಯ ಮತ್ತು ಅಧಿಕಾರ ಹಂಚಿಕೆಯ ಆಟಗಳು ಮುಂದುವರಿದರೆ ಪೂರ್ಣಾವಧಿ ಸಿಎಂಗಳ ಸಂಖ್ಯೆ ಹೆಚ್ಚಾಗುವುದು ಕಷ್ಟವಾಗುವ ಸಾಧ್ಯತೆ ಇದೆ.

**ಪೂರ್ಣಾವಧಿ ಪೂರೈಸಿದ ಮೂವರು ಸಿಎಂಗಳು :**

ಎಸ್. ನಿಜಲಿಂಗಪ್ಪ (1962–1968): ಮೊದಲ ಪೂರ್ಣಾವಧಿ ಸಿಎಂ ಎಂದು ಪ್ರಸಿದ್ಧರಾದ ಅವರು ರಾಜ್ಯದ ಅಭಿವೃದ್ಧಿಗೆ ಮುಖ್ಯ ಕೊಡುಗೆ ನೀಡಿದರು. ಆದರೆ ಅವರ ಮೊದಲ ಅವಧಿ (1956–58) ಅಲ್ಪಾವಧಿಯಲ್ಲೇ ಕೊನೆಗೊಂಡಿತ್ತು.

**ಡಿ. ದೇವರಾಜ ಅರಸು (1972–1977) :**

ಹಿಂದುಳಿದ ವರ್ಗಗಳ ಉದ್ಧಾರಕ್ಕೆ ಪ್ರಸಿದ್ಧರಾದ ಅರಸು ಅವರು ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಮಾದರಿಯನ್ನು ಸ್ಥಾಪಿಸಿದರು. ಅವರ ಆಡಳಿತವು ಇಂದಿಗೂ ಸ್ಮರಣೀಯವಾಗಿದೆ.

**ಸಿದ್ದರಾಮಯ್ಯ (2013–2018) :**

ಇತ್ತೀಚಿನ ಕಾಲದಲ್ಲಿ ಪೂರ್ಣಾವಧಿ ಪೂರೈಸಿದ ಏಕೈಕ ಸಿಎಂ. 5 ವರ್ಷಗಳ ಸಂಪೂರ್ಣ ಅವಧಿ ಪೂರೈಸಿದ ಅವರು ಈ ಬಾರಿ ಕೇವಲ 3 ವರ್ಷಗಳಲ್ಲಿ ಪದತ್ಯಾಗ ಮಾಡಿದ್ದಾರೆ.

**ಅಲ್ಪಾವಧಿ ಸಿಎಂಗಳ ಸರಣಿ :**

ಎಸ್. ನಿಜಲಿಂಗಪ್ಪ (1956–58) : ಲಿಂಗಾಯತ ಶಾಸಕರ ಬಂಡಾಯದಿಂದ ರಾಜೀನಾಮೆ. ವೀರೇಂದ್ರ ಪಾಟೀಲ್ (1968–71) : 1969ರ ಕಾಂಗ್ರೆಸ್ ವಿಭಜನೆಯ ನಂತರ ಬಹುಮತ ಕಳೆದುಕೊಂಡರು. ದೇವರಾಜ ಅರಸು (1978–80) : ಇಂದಿರಾ ಗಾಂಧಿ ಬಣದೊಂದಿಗಿನ ಭಿನ್ನಾಭಿಪ್ರಾಯದಿಂದ ರಾಜೀನಾಮೆ. ರಾಮಕೃಷ್ಣ ಹೆಗಡೆ (1985–88) : ಫೋನ್ ಟ್ಯಾಪಿಂಗ್ ಆರೋಪದ ನಂತರ ನೈತಿಕ ಹೊಣೆ ಹೊತ್ತು ರಾಜೀನಾಮೆ. ವೀರೇಂದ್ರ ಪಾಟೀಲ್ (1989–90) : ಕೋಮು ಗಲಭೆ ಮತ್ತು ಆರೋಗ್ಯ ಕಾರಣದಿಂದ ರಾಜೀನಾಮೆ. ಎಸ್. ಬಂಗಾರಪ್ಪ (1990–92) : ಭ್ರಷ್ಟಾಚಾರ ಆರೋಪ ಮತ್ತು ಒಳಬಂಡಾಯ. ಹೆಚ್.ಡಿ. ದೇವೇಗೌಡ (1994–96) : ಪ್ರಧಾನಮಂತ್ರಿಯಾದ ಕಾರಣ ರಾಜೀನಾಮೆ. ಎನ್. ಧರ್ಮಸಿಂಗ್ (2004–06) : ಜೆಡಿ-ಎಸ್ ಬೆಂಬಲ ಹಿಂಪಡೆಯುವಿಕೆ. ಹೆಚ್.ಡಿ. ಕುಮಾರಸ್ವಾಮಿ (2006–07): ಮೈತ್ರಿ ಒಪ್ಪಂದದ ಉಲ್ಲಂಘನೆ. ಬಿ.ಎಸ್. ಯಡಿಯೂರಪ್ಪ, ಸದಾನಂದ ಗೌಡ, ಜಗದೀಶ್ ಶೆಟ್ಟರ್ (2008–13) : ಅಕ್ರಮ ಗಣಿಗಾರಿಕೆ, ಒಳಬಂಡಾಯ. ಹೆಚ್.ಡಿ. ಕುಮಾರಸ್ವಾಮಿ, ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ (2018–2023) : ಏಕಪಕ್ಷೀಯ ಬಹುಮತ ಮತ್ತು ಸ್ಥಿರತೆಯ ಕಾಲ (1956 ? 1983) : ಕರ್ನಾಟಕದ ರಾಜಕೀಯ ಇತಿಹಾಸವು ಅತ್ಯಂತ ಕುತೂಹಲಕಾರಿಯಾದ



ಮತ್ತು ಏರಿಳಿತಗಳಿಂದ ಕೂಡಿದ ಪಯಣವಾಗಿದೆ. ರಾಜ್ಯದಲ್ಲಿ ಕಳೆದ ದಶಕಗಳಲ್ಲಿ ಸ್ಥಿರ ಸರ್ಕಾರಗಳು ಮತ್ತು ಅಸ್ಥಿರತೆಯ (ಆಪರೇಷನ್ ಕಮಲ, ಮೈತ್ರಿ ಸರ್ಕಾರಗಳ ಪತನ) ಕಾಲಘಟ್ಟಗಳನ್ನು ನಾವು ಕಾಣಬಹುದು.

ರಾಜ್ಯ ಪುನರ್ವಿಂಗಡಣೆಯ ನಂತರದ ಆರಂಭಿಕ ವರ್ಷಗಳಲ್ಲಿ, ಕಾಂಗ್ರೆಸ್ ಪಕ್ಷವು ಸುದೀರ್ಘ ಕಾಲ ಅಧಿಕಾರದಲ್ಲಿದ್ದಾಗ ರಾಜ್ಯದಲ್ಲಿ ಸ್ಥಿರತೆ ಇತ್ತು. ಡಿ.ದೇವರಾಜ ಅರಸ್ ಅವರಂತಹ ನಾಯಕರು ಪೂರ್ಣಾವಧಿ ಆಡಳಿತ ನಡೆಸಿ, ಸಾಮಾಜಿಕ ಸುಧಾರಣೆಗಳಿಗೆ ಅಡಿಪಾಯ ಹಾಕಿದರು.

**ಅಸ್ಥಿರತೆಯ ಆರಂಭ (1983 ? 1989) :**

1983ರಲ್ಲಿ ರಾಮಕೃಷ್ಣ ಹೆಗಡೆಯವರ ನೇತೃತ್ವದಲ್ಲಿ ಜನತಾ ಪಕ್ಷ ಅಧಿಕಾರಕ್ಕೆ ಬಂದಿತು. ಇದು ಕರ್ನಾಟಕದಲ್ಲಿ ಕಾಂಗ್ರೆಸ್ಸೇತರ ಸರ್ಕಾರದ ಆರಂಭವಾಗಿತ್ತು. ಈ ಅವಧಿಯಲ್ಲಿ ಮೈತ್ರಿ ಸರ್ಕಾರಗಳು ಮತ್ತು ಬೆಂಬಲದ ರಾಜಕೀಯ ಆರಂಭವಾಯಿತು.

**ಅತಂತ್ರ ವಿಧಾನಸಭೆ :**

2004, 2008 ಮತ್ತು 2018ರ ಚುನಾವಣೆಗಳಲ್ಲಿ ಯಾವುದೇ ಪಕ್ಷಕ್ಕೆ ಸ್ಪಷ್ಟ ಬಹುಮತ ಸಿಗಲಿಲ್ಲ. ಇದು ಕಿಂಗ್ ಮೇಕರ್ ಪಾತ್ರಕ್ಕೆ ಅವಕಾಶ ಮಾಡಿಕೊಟ್ಟಿತು.

ಜೆಡಿಎಸ್ ಪಾತ್ರ: ಸಣ್ಣ ಪಕ್ಷವಾದ ಜೆಡಿಎಸ್, ಬಿಜೆಪಿಯೊಂದಿಗೆ ಅಥವಾ ಕಾಂಗ್ರೆಸ್ಸಿನೊಂದಿಗೆ ಮೈತ್ರಿ ಮಾಡಿಕೊಳ್ಳುವ ಮೂಲಕ ಸರ್ಕಾರ ರಚನೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿತು.

**ಆಪರೇಷನ್ ಕಮಲ :**

2008 ಮತ್ತು 2019ರಲ್ಲಿ ಶಾಸಕರ ರಾಜೀನಾಮೆಯಿಂದ ಸರ್ಕಾರಗಳು ಪತನಗೊಂಡಿದ್ದು ಮತ್ತು ಮೈತ್ರಿ ಸರ್ಕಾರಗಳು ಅಲ್ಪಾಯುವಾದದ್ದು ರಾಜ್ಯದ ಇತಿಹಾಸದಲ್ಲಿ ಅಸ್ಥಿರತೆಯ ಮುಖ್ಯ ಘಟ್ಟಗಳಾಗಿವೆ.2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು 135 ಸ್ಥಾನಗಳನ್ನು ಗೆಲ್ಲುವ ಮೂಲಕ ಐತಿಹಾಸಿಕ ಮತ್ತು ಸ್ಪಷ್ಟ ಬಹುಮತವನ್ನು ಪಡೆಯಿತು. ಇದ-ರಿಂದಾಗಿ ರಾಜ್ಯದಲ್ಲಿ ಕಳೆದ ದಶಕದ ಅನಿಶ್ಚಿತತೆ ಕೊನೆಗೊಂಡು, ಒಂದು ಸ್ಥಿರ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ.

# ಡಿಕೆಶಿ ಸಿಎಂ ಆದ ಬಳಿಕವಾದರೂ ಬೆಂಗಳೂರಿನ ಸಮಸ್ಯೆಗಳಿಗೆ ಸಿಗುತ್ತಾ ಪರಿಹಾರ

ಬೆಂಗಳೂರು: ಬೆಂಗಳೂರು ಉಸ್ತುವಾರಿ ಸಚಿವರಾಗಿದ್ದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ನಗರದ ಅಭಿವೃದ್ಧಿ ವೇಗಗೊಳ್ಳಬಹುದು ಎಂಬ ಆಶಾಭಾವ ವ್ಯಕ್ತವಾಗಿದೆ.

ಬೆಂಗಳೂರು ಅಭಿವೃದ್ಧಿ ಸಚಿವರಾಗಿದ್ದ ಅವಧಿಯಲ್ಲಿ ಡಿ.ಕೆ. ಶಿವಕುಮಾರ್ ಅವರು ಬ್ರಾಂಡ್ ಬೆಂಗಳೂರು ಹಾಗೂ ಗ್ರೇಟರ್ ಬೆಂಗಳೂರು ಪರಿಕಲ್ಪನೆಗೆ ಹೆಚ್ಚಿನ ಒತ್ತು ನೀಡಿದ್ದರು. ನಗರವನ್ನು ಜಾಗತಿಕ ಮಟ್ಟದ ನಗರವನ್ನಾಗಿ ರೂಪಿಸುವ ಗುರಿಯೊಂದಿಗೆ ಹಲವು ಬೃಹತ್ ಮೂಲಸೌಕರ್ಯ ಯೋಜನೆಗಳನ್ನು ಘೋಷಿಸಿದ್ದರು. ಇದೀಗ ಅವರೇ ರಾಜ್ಯದ ಮುಖ್ಯಮಂತ್ರಿಯಾಗುತ್ತಿರುವುದರಿಂದ ಆ ಯೋಜನೆಗಳಿಗೆ ಮತ್ತಷ್ಟು ವೇಗ ಸಿಗುವ ನಿರೀಕ್ಷೆ ವ್ಯಕ್ತವಾಗುತ್ತಿದೆ.ಕಳೆದ ಮೂರು ವರ್ಷಗಳಲ್ಲಿ ನಗರದ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಮಹತ್ವಾಕಾಂಕ್ಷಿ ಯೋಜನೆಗಳ ರೂಪುರೇಷೆಗಳನ್ನು ಸಿದ್ಧಪಡಿಸುವಲ್ಲಿ ಶಿವಕುಮಾರ್ ಪ್ರಮುಖ ಪಾತ್ರವಹಿಸಿದ್ದರು. ಸರ್ಕಾರದ ಆರ್ಥಿಕ ಮಿತಿಗಳ ನಡುವೆಯೂ ಮೂಲಸೌಕರ್ಯ ಕಾಮಗಾರಿಗಳಿಗೆ ಹಣಕಾಸು ಒದಗಿಸುವುದು, ನೀತಿ ಬದಲಾವಣೆಗಳನ್ನು ಜಾರಿಗೆ ತರುವುದು ಹಾಗೂ ಆಡಳಿತಾತ್ಮಕವಾಗಿ ಕಠಿಣ ನಿರ್ಧಾರಗಳನ್ನು ಕೈಗೊಳ್ಳುವಲ್ಲಿ ಅವರು ಮುಂಚೂಣಿಯಲ್ಲಿದ್ದರು.

ಪ್ರಮುಖ ಯೋಜನೆಗಳಿಗೆ ವೇಗ?ಶಿವಕುಮಾರ್ ಅವರ ಕನಸಿನ ಯೋಜನೆಗಳಲ್ಲಿ ಉತ್ತರದಕ್ಷಿಣ ಹಾಗೂ ಪೂರ್ವಪಶ್ಚಿಮ ಸುರಂಗ ರಸ್ತೆ ಯೋಜನೆಗಳು, 126 ಕಿ.ಮೀ ಎತ್ತರದ ಕಾರಿಡಾರ್‌ಗಳು, ಹೆಬ್ಬಾಳ ಜಂಕ್ಷನ್ ಸುರಂಗ ಮಾರ್ಗ, ಪೆರಿಫೆರಲ್



ರಿಂಗ್ ರಸ್ತೆ , ಬಿಡದಿಯ ಸಮಗ್ರ ಟೌನ್‌ಶಿಪ್ ಯೋಜನೆ ಹಾಗೂ ಮಳೆನೀರಿನ ಚರಂಡಿಗಳ ಬಫರ್ ವಲಯಗಳಲ್ಲಿ ರಸ್ತೆ ನಿರ್ಮಾಣ ಯೋಜನೆಗಳು ಸೇರಿವೆ.

ಇದರ ಜೊತೆಗೆ, ದಕ್ಷಿಣ ಬೆಂಗಳೂ-ರಿಗೆ ಎರಡನೇ ವಿಮಾನ ನಿಲ್ದಾಣ ಸ್ಥಾಪನೆ ಕುರಿತೂ ಅವರು ನಿರಂತರವಾಗಿ ಧ್ವನಿ ಎತ್ತುತ್ತಿದ್ದಾರೆ. ಮುಖ್ಯಮಂತ್ರಿಯಾದರೆ ಇಂತಹ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ನಿರ್ಧಾರ ಪ್ರಕ್ರಿಯೆ ಇನ್ನಷ್ಟು ವೇಗವಾಗಿ ನಡೆಯುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಆಡಳಿತಾತ್ಮಕ ಸುಧಾರಣೆಗಳೂ ನಡೆದಿವೆ, ಅವರ ಅವಧಿಯಲ್ಲಿ ಕಟ್ಟಡ ವಿಚಲನ ಮಿತಿಯನ್ನು 5ರಿಂದ 15 ಶೇಕಡಕ್ಕೆ ಹೆಚ್ಚಿಸುವುದು, ಪ್ರೀಮಿಯಂ ಎಫ್‌ಎಆರ್ ಜಾರಿ, ಟಿಡಿಆರ್ ವ್ಯವಸ್ಥೆಯನ್ನು ಹೆಚ್ಚು ಆಕರ್ಷಕಗೊಳಿಸುವುದು ಹಾಗೂ ಜಾಹೀರಾತು ನೀತಿಯಲ್ಲಿ ಬದಲಾವಣೆ ತರಲು ಕಾನೂನು ತಿದ್ದುಪಡಿಗಳು ನಡೆದವು. ಅದೇ ರೀತಿ, ಬಿಬಿಎಂಪಿಯನ್ನು ಐದು ನಗರ ಪಾಲಿಕೆಗಳಾಗಿ ಪುನರ್‌ರಚಿಸಿ ಗ್ರೇಟರ್ ಬೆಂಗಳೂರು ಆಡಳಿತ ವ್ಯವಸ್ಥೆಗೆ ಅಡಿಪಾಯ ಹಾಕಿದ ಹೆಗ್ಗಳಿಕೆಯೂ ಅವರಿಗಿದೆ.ಬೃಹತ್ ಯೋಜನೆಗಳ ಜೊತೆಗೆ ಮೂಲಭೂತ ಸಮಸ್ಯೆಗಳಿಗೂ ಪರಿಹಾರ ಬೇಕುಆದರೆ ನಗರದ ಜನರ ಮುಂದೆ ಇರುವ ಪ್ರಶ್ನೆ ಬೇರೆ. ಸುರಂಗ ರಸ್ತೆ, ಎಲಿವೇಟೆಡ್ ಕಾರಿಡಾರ್‌ಗಳಂತಹ ಬೃಹತ್ ಯೋಜನೆಗಳಿಗಿಂತಲೂ, ದೈನಂದಿನ ಬದುಕಿಗೆ ಸಂಬಂಧಿಸಿದ ಸಮಸ್ಯೆಗಳ ಪರಿಹಾರವೇ ಜನರ ಮೊದಲ ಆದ್ಯತೆಯಾಗಿದೆ. ಪ್ರತಿ ಮಳೆಗಾಲದಲ್ಲೂ ಜಲಾವೃತವಾಗುವ ಪ್ರದೇಶಗಳು, ಮಳೆನೀರಿನ ಚರಂಡಿಗಳಲ್ಲಿ ಹ-ರಿಯುತ್ತಿರುವ ಕೊಳಚೆ ನೀರು, ಗುಂಡಿಮಯ ರಸ್ತೆಗಳು, ಹದಗೆಟ್ಟ ಪಾದಚಾರಿ ಮಾರ್ಗಗಳು, ಕಸದ ವಿಲೇವಾರಿ ಸಮಸ್ಯೆ, ಕೆರೆಗಳ ಸಂರಕ್ಷಣೆ, ಕುಡಿಯುವ ನೀರಿನ ಕೊರತೆ ಹಾಗೂ ವಿಳಂಬವಾಗುತ್ತಿರುವ ಮೆಟ್ರೋ ಕಾಮಗಾ-ರಿಗಳು ಇನ್ನೂ ನಗರವನ್ನು ಕಾಡುತ್ತಿವೆ.

ನಗರದ ಹಲವು ಭಾಗಗಳಲ್ಲಿ ರಸ್ತೆ ಡಾಂಬರೀಕರಣ, ಸಮರ್ಪಕ ಫುಟ್‌ಪಾತ್ ನಿರ್ಮಾಣ, ಸಂಚಾರ ದಟ್ಟಣೆ ನಿಯಂತ್ರಣ ಹಾಗೂ ಪರಿಸರ ಸಂರಕ್ಷಣೆ ಕುರಿತಂತೆ ನಾಗರಿಕರ ನಿರೀಕ್ಷೆಗಳು ಹೆಚ್ಚಿವೆ.ತಜ್ಞರ ಅಭಿಪ್ರಾಯವೇನು?ಮಾಜಿ ಕಾರ್ಪೊರೇಟರ್ ಅಬ್ದುಲ್ ವಾಜಿದ್ ಅವರ ಪ್ರಕಾರ, ಬೆಂಗಳೂ-ರಿಗೆ ದೀರ್ಘಾವಧಿಯ ಸಂಚಾರ ಪರಿಹಾರಕ್ಕಾಗಿ ದೊಡ್ಡ ಮೂಲಸೌಕರ್ಯ ಯೋಜನೆಗಳು ಅಗತ್ಯ.

ಆರಂಭದಲ್ಲಿ ವಿರೋಧ ಎದುರಾದರೂ, ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆಗಳನ್ನು ಜಾರಿಗೊಳಿಸಬೇಕು ಎನ್ನುವುದು ಅವರ ಅಭಿಪ್ರಾಯ.ಇನ್ನೊಂದೆಡೆ, ತಜ್ಞರು ಹೇಳುವುದು ಯಾವುದೇ ದೊಡ್ಡ ಯೋಜನೆ ಜಾರಿಗೆ ಮುನ್ನ ವೃತ್ತಿಪರ ಹಾಗೂ ವೈಜ್ಞಾನಿಕ ಪರಿಶೀಲನೆ ನಡೆಯಬೇಕು ಎಂದು ಸಲಹೆ ನೀಡಿದ್ದಾರೆ. ಬೆಂಗಳೂರು ಮಹಾನಗರ ಭೂ ಸಾರಿಗೆ ಪ್ರಾಧಿಕಾರದ ಮೂಲಕ ಎಲ್ಲ ಚಲನಶೀಲತೆ ಯೋಜನೆಗಳನ್ನು ಪರಿಶೀಲಿಸಿದರೆ ಉತ್ತಮ ನಿರ್ಧಾರಗಳು ಸಾಧ್ಯವಾಗುತ್ತವೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ನಗರದ ಜನರ ಪ್ರಶ್ನೆ:ಡಿ. ಕೆ. ಶಿವಕುಮಾರ್ ಮುಖ್ಯಮಂತ್ರಿಯಾದರೆ ಬ್ರಾಂಡ್ ಬೆಂಗಳೂರು ಕನಸಿಗೆ ಹೊಸ ವೇಗ ಸಿಗಬಹುದು. ಬೃಹತ್ ಯೋಜನೆಗಳಿಗೆ ಚಾಲನೆ ದೊರೆಯಬಹುದು. ಆದರೆ ಅದೇ ಸಮಯದಲ್ಲಿ ನಗರದ ಜನರನ್ನು ಪ್ರತಿದಿನ ಕಾಡುತ್ತಿರುವ ಕಸ, ರಸ್ತೆ ಗುಂಡಿ, ಜಲಾವೃತ, ಕುಡಿಯುವ ನೀರು, ಫುಟ್‌ಪಾತ್ ಹಾಗೂ ಕೆರೆಗಳ ಅಭಿವೃದ್ಧಿಯಂತಹ ಮೂಲಭೂತ ಸಮಸ್ಯೆಗಳಿಗೂ ಶಾಶ್ವತ ಪರಿಹಾರ ಸಿಗುತ್ತದೆಯೇ ಎಂಬುದು ಈಗ ಬೆಂಗಳೂರಿಗರನ್ನು ಕಾಡುತ್ತಿರುವ ದೊಡ್ಡ ಪ್ರಶ್ನೆಯಾಗಿದೆ.

# ಸ್ತ್ರೀಯರಿಗೆ ವೇದದ, ಉಪನಯನದ (ಗಾಯತ್ರೀ ಮಂತ್ರ; ಓಂಕಾರ) ಅಧಿಕಾರ ಇಲ್ಲಾ ಏಕೆ?

ಉತ್ತರ:ಅಧ್ಯಾತ್ಮ ಜ್ಞಾನ ಎಲ್ಲರಿಗೂ ಮುಟ್ಟಬೇಕು. ಆದರೆ ಇಲ್ಲಿ "ಸ್ತ್ರೀಯರಿಗೆ ವೇದದ, ಉಪನಯನದ("ಗಾಯತ್ರೀ ಮಂತ್ರ; ಓಂಕಾರ ") ಅಧಿಕಾರ ಇಲ್ಲಾ ಎಂದು ಏಕೆ ಹೇಳಿದರು ಎನ್ನುವುದನ್ನು ನಾವು ಮೊದಲು ಅರಿಯಬೇಕು. ಯಾವುದೇ ಒಂದು ಅಧ್ಯಯನಕ್ಕೆ ಲಿಂಗ–ಜಾತಿ ಮಾನದಂಡವಲ್ಲ. ಜ್ಞಾನಕ್ಕೆ ಮಾನದಂಡ ಅರ್ಹತೆ. ವಿದ್ಯೆಯನ್ನು ಅರ್ಹತೆ ಇಲ್ಲದವರಿಗೆ ಹೇಳಿದರೆ ಅದು ದುರುಪಯೋಗ ಅಥ–'ವಾ ನಿರುಪಯೋಗವಾಗುತ್ತದೆ. ಹೀಗಾಗಿ ಅರ್ಹತೆಯನ್ನು ಪರೀಕ್ಷಿಸದೇ ಯಾವುದೇ ವಿದ್ಯೆಯನ್ನು ಕೊಡುವ ಕ್ರಮವಿಲ್ಲ. ವೇದ ಕೂಡಾ ಅಷ್ಟೇ. ಗ್ರಹಣ ಮಾಡುವ ಸಾಮರ್ಥ್ಯ ಇದ್ದವರಷ್ಟೇ ವೇದದ ಅಧಿಕಾರಿಗಳು.

ಇಲ್ಲಿ "ಸ್ತ್ರೀಯರಿಗೆ ವೇದವನ್ನು ಗ್ರಹಣ ಮಾಡುವ ಸಾಮರ್ಥ್ಯ ಇಲ್ಲವೇ?" ಎನ್ನುವ ಪ್ರಶ್ನೆ ಎಲ್ಲರಿಗೂ ಬರುತ್ತದೆ. ಇದನ್ನು ಅರ್ಥಮಾಡಿಕೊಳ್ಳಲು ನಾವು ಇತಿಹಾಸವನ್ನು ನೋಡಬೇಕಾಗುತ್ತದೆ. ಹಿಂದೆ ಸ್ತ್ರೀಯರಲ್ಲಿ ಎರಡು ವರ್ಗವಿತ್ತು. 1. ವೇದಾಧ್ಯಯನಕ್ಕೋಸ್ಕರ ಮದುವೆಯಾಗದೇ ಇರುತ್ತಿದ್ದ 'ಬ್ರಹ್ಮವಾದಿನಿ'ಯರು ಹಾಗೂ 2. ಪ್ರಾರ್ಥಮಿಕ ಅಧ್ಯಯನದ ನಂತರ ಮದುವೆಯಾಗುತ್ತಿದ್ದ 'ಸತ್ಯವಧು'ಗಳು. ಬ್ರಹ್ಮವಾದಿನಿಯರು ಸಾಮಾಜಿಕವಾಗಿ ಅತಂತ್ರರಾಗಿರುತ್ತಿದ್ದರು. ರಕ್ಷಣೆ ಇಲ್ಲದ ಹೆಣ್ಣನ್ನು ಸಮಾಜ ಕೆಟ್ಟದೃಷ್ಟಿಯಿಂದ ಕಾಣುವ ಅಪಾಯ ಅಲ್ಲಿತ್ತು.

ವೇದವ್ಯಾಸರೇ ಭಾರತದಲ್ಲಿ ಹೇಳುವಂತೆ: "ಹೇಗೆ ಮಾರ್ಗದಲ್ಲಿ ಬಿದ್ದಿರುವ ಮಾಂಸದ ತುಂಡನ್ನು ಹದ್ದು–ನಾಯಿಗಳು ನೋಡುತ್ತಾವೋ ಹಾಗೇ, ರಕ್ಷಣೆ ಇಲ್ಲದ ಹೆಣ್ಣನ್ನು ಸಮಾಜ ಕಾಣುತ್ತದೆ" ಎಂದು. ಇದಕ್ಕಾಗಿ ಸ್ತ್ರೀಯರು ಮದುವೆಯಾಗುವುದೇ ಉತ್ತಮ ಎನ್ನುವ ಸಾಮಾಜಿಕ ಪದ್ಧತಿ ಜಾರಿಗೆ ಬಂತು. ಇಲ್ಲಿ ನಮಗೆ ಮುಂದೆ ಕಾಡುವ ಪ್ರಶ್ನೆ ಏನೆಂದರೆ: "ಮದುವೆಯಾದ ಹೆಣ್ಣು ಏಕೆ ವೇದಾಧ್ಯಯನ ಮಾಡಬಾರದು" ಎನ್ನುವುದು. ಸೂಕ್ಷ್ಮವಾಗಿ ಈ ವಿಚಾರವನ್ನು ನಾವು ವಿಶ್ಲೇಷಿಸಿದರೆ ನಮಗೆ ತಿಳಿಯುವುದೇನೆಂದರೆ ಸಮಾಜಕ್ಕೆ ಒಂದು ಉತ್ತಮ ಸಂತಾನವನ್ನು ಹೆತ್ತು ಕೊಡುವ ಜವಾಬ್ಧಾರಿ ಹೆಣ್ಣಿನಲ್ಲಿದೆ. ಅತಿಯಾದ ಮಾನಸಿಕ ಒತ್ತಡಕ್ಕೊಳಗಾದ ಹೆಣ್ಣಿನ ಗರ್ಭಕೋಶ ದುರ್ಬಲವಾಗುವ ಅಪಾಯವಿದೆ ಎಂದು ಇಂದಿನ ವೈದ್ಯಶಾಸ್ತ್ರ ಹೇಳುತ್ತದೆ. ವೇದಾಧ್ಯಯನ ಹಾಗೂ ಮಗುವಿನ ಪಾಲನೆ ಹೆಣ್ಣಿಗೆ ಎರಡು ದೋಣಿಯಲ್ಲಿ ಕಾಲಿಟ್ಟ ಪಯಣ. ಇದು ಆಕೆಯಲ್ಲಿ ಜನಿಸುವ ಮಗುವಿನ ಮೇಲೆ ಪ್ರಭಾವಬೀರಬಹುದು. "ಸಮಾಜಕ್ಕೆ ಉತ್ತಮ ಸಂತಾನ ಕೊಡುವುದು ಹೆಣ್ಣಿನ ಕರ್ತವ್ಯ ಹಾಗೂ ಅದು ವೇದಾಧ್ಯಯನ ಮಾಡುವುದಕ್ಕಿಂತ ಹೆಚ್ಚಿನ ಪುಣ್ಯದಕೆಲಸ" ಎಂದು ಶಾಸ್ತಕಾರರು ಹೇಳುತ್ತಾರೆ.

ಇದು ಪ್ರಕೃತಿಯ ಕೊಡುಗೆಯನ್ನು ನಾವು ಜೀವನದಲ್ಲಿ ಹೊಂದಾಣಿಕೆ ಮಾಡಿಕೊಂಡು ಬದುಕುವ ವಿಧಾನ. ಇದನ್ನು ಬಿಟ್ಟು ಇಲ್ಲಿ ಭೇದಭಾವ,



ಮೇಲು–ಕೀಳು ಯಾವುದೂ ಇಲ್ಲ. ಹೆಣ್ಣಿಗೆ ವೇದಾಧಿಕಾರ ಇಲ್ಲ ಎಂದಿಲ್ಲ. ಏಕೆಂದರೆ ಅವರು "ಧರ್ಮೇಚ ಅರ್ಥೇಚ ಕಾಮೇಚ ನಾತಿಚರಾಮಿ" ಎಂದು ಪ್ರತಿಜ್ಞೆ ಮಾಡುವವರು. ಗಂಡ ಮಾಡುವ ಧರ್ಮ ಕಾರ್ಯದಲ್ಲಿ ಸ್ತ್ರೀಗೆ ಸಹಭಾಗವಿದೆ. ಇವೆಲ್ಲವೂ ವೈದಿಕವಾಗಿಯೇ ನಡೆಯುತ್ತದೆ ಮತ್ತು ಅಲ್ಲಿ ಸ್ತ್ರೀ ಕುಳಿತು ಸಂಕಲ್ಪ ಮಾಡುತ್ತಾಳೆ. ಆದ–'ರೆ "ವೇದಾಧ್ಯಯನಕ್ಕೆ ಬದುಕನ್ನು ಮೀಸಲಿಟ್ಟು ಸಾಂಸಾರಿಕ ಜೀವನವನ್ನು ನೀರಸ ಮಾಡಿಕೊಳ್ಳಬೇಡಿ" ಎನ್ನುವುದು ಹಿಂದಿನವರ ಕಿವಿಮಾತು.

ಕೆಲವು ಅಸಾಧಾರಣ ವ್ಯಕ್ತಿತ್ವವುಳ್ಳ ಸ್ತ್ರೀಯರಿದ್ದಾರೆ. ವೇದ ಮಂತ್ರವನ್ನು ಕಂಡ ಋಷಿಕೆಯರೂ ಇದ್ದಾರೆ. ಆದರೆ ಸ್ತ್ರೀಯರ ಮೇಲೆ ವೇದಾಧ್ಯಯನದ ಒತ್ತಡ/ಹೇರಿಕೆ ನಿಷಿದ್ಧ. ಭಗವಂತನ ಸೃಷ್ಟಿಕ್ರಿಯೆಯ ಮೂಲಸಾಧನ ಹೆಣ್ಣು. ಆತ ತನ್ನ ಸೃಷ್ಟಿಕ್ರಿಯೆಗೆ ನಮ್ಮನ್ನು ಮಾಧ್ಯಮವಾಗಿ ಬಳಸುತ್ತಾನೆ ಎನ್ನುವುದು ಹೆಣ್ಣಿಗೆ ಹೆಮ್ಮೆಪಡುವ ಸಂಗತಿ. ಅಂತಹ ಶ್ರೇಷ್ಠ ಕಾರ್ಯ ಮಾಡಲು ಇಂತಹ ಕೆಲವು ನಿಯಮಗಳನ್ನು ಶಾಸ್ತ್ರ ಹೇಳುತ್ತದೆ. ದುರ್ಬಲವಾದ ಮಗುವನ್ನು ಕೊಡುವ ತಾಯಿಯಾಗಬಾರದು ಎನ್ನುವ ಉದ್ದೇಶದಿಂದ, ಸ್ತ್ರೀಯರಿಗೆ ಬಲವಂತದ ಉಚ್ಚಶಿಕ್ಷಣವನ್ನು ಶಾಸ್ತ್ರ ನಿಷೇಧಿಸುತ್ತದೆ.

ಎರಡು ದೋಣಿಯಲ್ಲಿ ಕಾಲಿಟ್ಟು ಮಾಡುವ ಪಯಣ ಎಂದೂ ಶ್ರೇಯಸ್ಕರವಲ್ಲ. ಅಲ್ಲಿ ಒಂದೇ ನಮ್ಮ ಸಂತಾನಕ್ಕೆ ಅಥವಾ ನಮಗೇ ಅನ್ಯಾಯವಾಗುವ ಸಾಧ್ಯತೆ ಹೆಚ್ಚು. ಇವು ಜೀವನದ ಅನುಭವದ ಮಾತೇ ಹೊರತು, ಪಕ್ಷಪಾತದ ಹೇಳಿಕೆಗಳಲ್ಲ. ವೇದಸಂಸ್ಕೃತ ಅತ್ಯಂತ ಭಿನ್ನ. ಸಂಸ್ಕೃತ ಭಾಷೆಯನ್ನು ಚನ್ನಾಗಿ ಬಲ್ಲ ಪಂಡಿತರಿಗೇ ವೇದ ಅರ್ಥವಾಗುವುದಿಲ್ಲ. ವೇದದ ಅಂತರಂಗ, ಅದರಲ್ಲಿರುವ ಅಧ್ಯಾತ್ಮ ರಹಸ್ಯ ಅತ್ಯಂತ ಗುಹ್ಯ. ಹೀಗಾಗಿ ವೇದದ ಮೇಲ್ನೋಟದ ಅರ್ಥ ತಿಳಿಯಲಿಕ್ಕೇ ಒಂದು ಜನ್ಮ ಸಾಲದು. ಆದ್ದ–ರಿಂದ ಇಡೀ ಜೀವನವನ್ನು ವೇದಾಧ್ಯಯನಕ್ಕೆ ಮುಡಿಪಾಗಿಡಲು ಬದ್ಧರಾದವರು ಮಾತ್ರ ವೇದಾಧ್ಯಯನಕ್ಕೆ ಕೈಹಾಕಬೇಕು. ಹಾಗೆ ಅಧ್ಯಯನ ಮಾಡಲು ಬ್ರಾಹ್ಮಣ್ಯದ ಅರ್ಹತೆ ಬಹಳ ಮುಖ್ಯ.

ಬ್ರಾಹ್ಮಣ್ಯ ಅಂದರೆ ಶಮಃ ದಮಃ ತಪಃ ಶೌಚಂ ಕ್ಷಾಂತಿ ಆರ್ಜವಮ್ ಏವ ಚ ? ಜ್ಞಾನಂ ವಿಜ್ಞಾನಮ್ ಆಸ್ತಿಕ್ಯಂ ಬ್ರಹ್ಮಕರ್ಮ ಸ್ವಭಾವಜಮ್. ಭಗವಂತನಲ್ಲಿ ನಿಷ್ಠೆ, ಇಂದ್ರಿಯಗಳಲ್ಲಿ ಹಿಡಿತ, ಉಪವಾಸಾದಿ ನೇಮಗಳು, ನೈರ್ಮಲ್ಯ, ಅಪಕಾರಿಯನ್ನೂ ಮನ್ನಿಸುವ ಸೈರಣೆ, ನೇರ ನಡೆ–ನುಡಿ, ತಿಳಿವು, ಆಳವಾದ ಸಂಶೋಧನಾ ದೃಷ್ಟಿ ಮತ್ತು ಆಸನ ಇಂತಹ ಅನೇಕ ಗುಣಗಳಿದ್ದರೆ ಮಾತ್ರ ವೇದಾಧ್ಯಯನಕ್ಕೆ( ಉಪನಯನ)ಅರ್ಹತೆ. ಲೋಕಾಃ ಸಮಸ್ತಾಃ ಸುಖಿನೋ ಭವಂತು.



ಪ್ರಶಾಂತಭಟ್ ಕೋಟೇಶ್ವರ

# ಆತ್ಮಹತ್ಯೆ.., ಆಯ್ಕೆಯೇ ಅಲ್ಲ

ಶಾಲೆಯೊಂದರಲ್ಲಿ ಶಿಕ್ಷಕಿ ಆಗಿರುವ ಓರ್ವ ಹೆಣ್ಣು ಮಗಳು ತನ್ನ ಗಂಡನ ಮನೆಯಲ್ಲಿ ಕಿರುಕುಳ ಅನುಭವಿಸಲಾಗದೆ ತನ್ನ ತವರಿನವ–ರಿಗೆ, ಗಂಡನಿಗೆ ಪ್ರತ್ಯೇಕವಾಗಿ ಪತ್ರ ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಆಕೆ ಪತ್ರದಲ್ಲಿ ತನ್ನ ಗಂಡನಿಗೆ 'ಅಡುಗೆ ಮಾಡಿದ್ದೇನೆ ಊಟ ಮಾಡಿ ' ಎಂದು ಬರೆದಿದ್ದು, ತನ್ನ ಪಾಲಕರಿಗೆ ಬರೆದ ಪತ್ರದಲ್ಲಿ 'ನನ್ನ ಗಂಡನ ಮನೆಯವರಿಗೆ ನನ್ನ ದುಡಿಮೆಯ ಮೇಲೆ ಆಸೆ ಇದೆಯೇ ಹೊರತು ನನ್ನ ಬೇಕು ಬೇಡಗಳಲ್ಲ. ನಾನೊಂದು ದುಡಿಯುವ ಯಂತ್ರದಂತೆ ಅವರು ನನ್ನನ್ನು ಭಾವಿಸಿದ್ದಾರೆ' ಎಂದು ದೂರಿರುವ ಆಕೆ 'ನನ್ನ ಮಗ ಅವರ ಅಪ್ಪನಂತೆ ಆಗುವುದು ಬೇಡ, ಆತನನ್ನು ನೀವೇ ಸಾಕಿ ಸಲಹಿ ' ಎಂದು ತನ್ನ ಪಾಲಕ–ರಿಗೆ ಹೇಳಿದ್ದಾಳೆ.

ಮತ್ತೋರ್ವ ಹೆಣ್ಣು ಮಗಳು ಕಾಲೇಜಿನಲ್ಲಿ ಉಪನ್ಯಾಸಕಿಯಾಗಿದ್ದು ಆರಂಕಿಯ ಸಂಬಳವನ್ನು ಎಣಿಸುತ್ತಿದ್ದಳು. ಪತಿ ಪತ್ನಿಯರ ನಡುವಿನ ಹೊಂದಾಣಿಕೆ ಸಾಧ್ಯವಾಗದೆ ಆಕೆಯ ಮೊದಲನೆಯ ವಿವಾಹ ಮುರಿದು ಬಿತ್ತು..... ಇದ–ರಿಂದ ಸಾಕಷ್ಟು ನೊಂದುಕೊಂಡ ಆಕೆ ಸ್ಥಳ ಬದಲಾವಣೆಯಾಗಲೆಂದು ದೂರದ ಊರಿಗೆ ವರ್ಗಾವಣೆಯಾಗಿ ಬಂದಳು. ತಂದೆ ತಾಯಿ ಆಕೆಗೆ ಮತ್ತೊಂದು ವಿವಾಹದ ಪ್ರಯತ್ನವನ್ನು ಮುಂದುವರೆಸಿದರು. ಈ ಬಾರಿ ಎಲ್ಲ ರೀತಿಯಿಂದಲೂ ನೋಡಿ ಆಕೆಗೆ ಒಪ್ಪಿಗೆಯಾದ ವ್ಯಕ್ತಿಯೊಂದಿಗೆ ಆಕೆಯ ವಿವಾಹವನ್ನು ಮಾಡಿದರು.

ಆದರೆ ಇಲ್ಲೂ ಆಕೆಯ ದುರಾದೃಷ್ಟ ಆಕೆಯ ಬೆನ್ನನ್ನು ಬಿಡಲಿಲ್ಲ. ಮದುವೆಯಾದ ಕೇವಲ ಎರಡು ತಿಂಗಳಲ್ಲಿ ತನ್ನ ಎರಡನೆಯ ಪತಿಗೆ ಈಗಾಗಲೇ ಮದುವೆಯಾಗಿ ಒಂದು ಮಗು ಇರುವ ವಿಷಯ ಆಕೆಗೆ ತಿಳಿಯಿತು. ಈ ಕುರಿತು ಸದಾ ಗಂಡನೊಂದಿಗೆ ಚರ್ಚೆ, ವಾಗ್ವಾದ ನಡೆದು ಮುಂದಿನ ಒಂದೆರಡು ತಿಂಗಳಲ್ಲಿ ಆಕೆ ಮನೆಯವರಿಗೂ ಕನ್ನ ಮಾನಸಿಕ ವ್ಯಥೆಯನ್ನು ತಿಳಿಸದೆ ಮನೆಯ ಕಿಟಕಿಗೆ ತನ್ನದೇ ದುಪಟ್ಟದಿಂದ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಳು.

ಮತ್ತೊಂದು ಪ್ರಕರಣದಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಮಾಡಿ ವಿದೇಶದಲ್ಲಿ ನೌಕ–ರಿಯನ್ನು ಪಡೆದ ವ್ಯಕ್ತಿ ಒಬ್ಬ ಮದುವೆಯಾಗಿ ಅಲ್ಲಿಯೇ ನೆಲೆಸಿದ. ನಾಲ್ಕು ಬೆಡ್ರೂಮಿನ ದೊಡ್ಡ ಮನೆ, ಐಷಾರಾಮಿ ಕಾರು, ಒಳ್ಳೆಯ ಶಾಲೆಗಳಲ್ಲಿ ಮಕ್ಕಳ ವಿದ್ಯಾಭ್ಯಾಸ ಹಾಗೂ ಇದರ ಜೊತೆಗೆ ವಿಪರೀತ ಕ್ರೆಡಿಟ್ ಕಾರ್ಡ್ ಗಳ ಸೌಲಭ್ಯವನ್ನು ಪಡೆದುಕೊಂಡ ಸಾಲದ ಕಂತುಗಳು ಆತನಿಗಿದ್ದವು... ಒಂದೊಮ್ಮೆ ಅಮೆರಿಕದಲ್ಲಿ ಉದ್ಭವಿಸಿದ ಸಂಕಟದಲ್ಲಿ



ಆತ ತನ್ನ ನೌಕರಿಯನ್ನು ಕಳೆದುಕೊಂಡನು. ತೀವ್ರ ಮಾನಸಿಕ ಆಘಾತಕ್ಕೆ ಒಳಗಾದ ಆತ ಮುಂದಿನ ಕೆಲವೇ ದಿನಗಳಲ್ಲಿ ಆತ್ಮಹತ್ಯೆಗೆ ಶರಣಾದನು.

ಕಥೆ ಇಷ್ಟಕ್ಕೆ ಮುಗಿಯಲಿಲ್ಲ... ನಮ್ಮದೇ ಕರ್ನಾಟಕದ ನೆಲದಲ್ಲಿ ಹುಟ್ಟಿದ ಇಡೀ ಜಗತ್ತಿನಾದ್ಯಂತ ಕೆಫೆ ಕಾಫಿ ಡೇ ಗಳನ್ನು ಹುಟ್ಟು ಹಾಕಿದ.. ಆ ಮೂಲಕವೇ ಸಾವಿರಾರು ಕೋಟಿ ರೂಗಳ ವ್ಯವಹಾರವನ್ನು ಮಾಡಿ ಯಶಸ್ವಿಯಾಗಿ ಉದ್ಯಮವನ್ನು ಕಟ್ಟಿಕೊಂಡು ಒಂದಿಡೀ ತಲೆಮಾರಿನ ಜನರಿಗೆ ಅತ್ಯಂತ ಸಾಮಾನ್ಯ ವ್ಯಕ್ತಿಯು ಕೂಡ ಪ್ರಯತ್ನ ಪಟ್ಟರೆ ಗಗನವನ್ನು ಚುಂಬಿಸಬಹುದಾದ ಯಶಸ್ಸನ್ನು ಪಡೆಯಬಹುದು ಎಂಬ ಕನಸನ್ನು ಕಟ್ಟಿಕೊಟ್ಟ ಸಿದ್ದಾರ್ಥ್ ಕೂಡ ಆತ್ಮಹತ್ಯೆ ಮಾಡಿಕೊಂಡರು.

ಬಹುತೇಕ ಜಗತ್ತಿನ ಬಹಳಷ್ಟು ಸ್ತ್ರೀಯರು ಈ ರೀತಿಯ ಕೌಟುಂಬಿಕ ದೌರ್ಜನ್ಯವನ್ನು ಅನುಭವಿಸುತ್ತಿದ್ದಾರೆ ಎಂಬುದು ಎಷ್ಟು ನಿಜವೋ ದೀಪದ ಕೆಳಗೆ ಕತ್ತಲೆ ಇರುತ್ತದೆ ಎಂಬುದು ಕೂಡ ಅಷ್ಟೇ ನಿಜ. ಸಾಯುವ ಮುನ್ನ ಪಾಲಕರಿಗೆ ತನ್ನ ಗಂಡನ ಮನೆಯವರ ನಡಾವಳಿಯ ಬಗ್ಗೆ ಹೇಳುವ ಹೆಣ್ಣುಮಗಳು ಅದಕ್ಕೂ ಮುನ್ನ ಕೂಡ ಈ ಕುರಿತು ತನ್ನ ಪಾಲಕರಿಗೆ ದೂರು ಹೇಳಿರಬಹುದು. ಸಾಮಾನ್ಯವಾಗಿ ಎಲ್ಲಾ ಪಾಲಕರು ಹೇಳುವ ಹಾಗೆ ಆಕೆಯ ಪಾಲಕರು ಕೂಡ ಹೊಂದಿಕೊಂಡು ಹೋಗು ಎಂದು ಹೇಳಿರಲೂಬಹುದು.

ಇದರರ್ಥ ಆಕೆ ಜೀವ ಕಳೆದುಕೊಳ್ಳಲಿ ಎಂದಲ್ಲ. ತನಗೆ ಕೆಲಸ ಮಾಡಲಾಗದೆ ಹೋದಾಗ ನಯವಾಗಿ ಆದರೆ ಅಷ್ಟೇ ದೃಢವಾಗಿ ತಿರಸ್ಕರಿಸುವ ಆಕೆಯ ಹಕ್ಕನ್ನು ಆಕೆಯಿಂದ ಯಾರೂ ಕಿತ್ತುಕೊಂಡಿರುವುದಿಲ್ಲ. ಅಷ್ಟಕ್ಕೂ ಆಕೆ ಅವರ ದೌರ್ಜನ್ಯದಿಂದ ಬೇಸತ್ತಿದ್ದರೆ ಸ್ವಂತ ದುಡಿಮೆಯನ್ನು ಹೊಂದಿದ್ದು ಬೇರೆ ಮನೆಯನ್ನು ಮಾಡಿಕೊಂಡು ತನ್ನ ಮಗುವಿನೊಂದಿಗೆ ವಾಸಿಸಬಹುದಿತ್ತು. ಬದುಕೇ ಬೇಡ ಎಂದು ಆರ್ಥಿಕವಾಗಿ ಸಬಲಳಾಗಿರುವ ಓರ್ವ ಮಹಿಳೆ ಸಾವಿನತ್ತ ಮುಖ ಮಾಡಲು ಇರುವ ಸಾಮಾಜಿಕ ಕಾರಣವಾದರೂ ಏನು??

ಜಗತ್ತಿನ ಪ್ರಖ್ಯಾತ ಉದ್ಯಮಿ ಕೇವಲ ಕೆಲವೇ ಕೋಟಿಗಳಷ್ಟು ಸಾಲಕ್ಕೆ ಹೆದರಿ ಆತ್ಮಹತ್ಯೆ ಮಾಡಿಕೊಂಡರು ಎಂದರೆ ನಂಬಲು ಸಾಧ್ಯವೇ. ಅವರು ತಮ್ಮ ಕಂಪನಿಯ ಅರ್ಧದಷ್ಟು ಶೇರುಗಳನ್ನು ಮಾರಿದ್ದರು ಅವರ ಸಾಲ ತೀರಿ ಹೋಗುತ್ತಿತ್ತು. ಹಾಗಿದ್ದರೆ ಚಾಣಾಕ್ಷತೆ ಮೈಯೆಲ್ಲಾ ಕಣ್ಣಾಗಿಸಿಕೊಳ್ಳುವ ವ್ಯವಹಾರಪರತೆ, ಕಳೆದುಕೊಂಡದ್ದೆಲ್ಲವನ್ನು ಮತ್ತೆ ಸಂಪಾದಿಸುವ ಧೈರ್ಯ ಎಲ್ಲವೂ ಇರುವ ವ್ಯಕ್ತಿ, ಶೂನ್ಯದಿಂದ ಮೇಲೆ ಬಂದ ವ್ಯಕ್ತಿ ತನ್ನದೇ ಬಲದಿಂದ ಒಂದು ಇಡೀ ಔದ್ಯೋಗಿಕ ಸಾಮ್ರಾಜ್ಯವನ್ನು ಕಟ್ಟಿದ ವ್ಯಕ್ತಿ ಸೋತದ್ದೆಲ್ಲಿ??

ಕಾರಣಗಳು ಏನೇ ಇರಲಿ, ಹೇಗೇ ಇರಲಿ ಸೋಲುತ್ತಿದ್ದೇನೆ ಎಂಬ ಹತಾಶ ಮನಸ್ಥಿತಿ ವ್ಯಕ್ತಿಯಲ್ಲಿ ಜೀವವನ್ನೇ ಕೊನೆಗಾಣಿಸಿಕೊಳ್ಳುವ ಮಟ್ಟಕ್ಕೆ ಒಯ್ಯುವವರೆಗೆ ಆತ ಹೇಗೆ ಸುಮ್ಮನಿದ್ದ? ಆತನ ಉದ್ಯಮ ಪ್ರಪಂಚ ಒಂದೇ ದಿನಕ್ಕೆ ಧರೆಗುರುಳಲು ಸಾಧ್ಯವೇ? ಆತನ ಔದ್ಯೋಗಿಕ ಸಲಹೆಗಾರರು ಎಲ್ಲಿ ಹೋಗಿದ್ದರು.? ಕುಟುಂಬಕ್ಕೆ ಆತನ ಉದ್ಯಮದಲ್ಲಾಗುತ್ತಿರುವ ಅಲ್ಲೋಲ ಕಲ್ಲೋಲ್ಲಗಳ, ಆತನ ಮಾನಸಿಕ ತುಮುಲಗಳ ಅರಿವಿತ್ತೇ?ಎಂಬ ಹತ್ತು ಹಲವು ಪ್ರಶ್ನೆಗಳು ನಮ್ಮನ್ನು ಕಾಡುತ್ತವೆ.

ಸಣ್ಣಪುಟ್ಟ ಉದ್ಯಮಿಗಳು ಕೂಡ ಬಹಳಷ್ಟು ಬಾರಿ ತಮ್ಮ ಕುಟುಂಬದವರ, ಸ್ನೇಹಿತರ, ಹಣಕಾಸು ಆಪ್ತ ಸಹಾಯಕರ ಸಹಾಯವನ್ನು ಪಡೆದೇ ಪಡೆಯುತ್ತಾರೆ. ಅಂತದ್ದರಲ್ಲಿ ಜಗತ್ತಿನ ಪ್ರತಿಷ್ಠಿತ ಉದ್ಯೋಗವನ್ನು ಸೃಷ್ಟಿ ಮಾಡಿ ಕಾರ್ಪೊರೇಟ್ ವಲಯದಲ್ಲಿ ತಮ್ಮನ್ನು ತಾವೇ ಪರಿಚಯಿಸಿಕೊಂಡು ಯಶಸ್ವಿಯಾದ ಉದ್ಯಮಿ ಹಾಗೆ ಆತ್ಮಹತ್ಯೆ ಮಾಡಿಕೊಳ್ಳಲು ಕಾರಣವೇನು ಎಂದು ಹುಡುಕಿದಾಗ ಉತ್ತರವಿಲ್ಲದೇ ಹೋಗುತ್ತದೆ.

ಕೆಲವೇ ದಶಕಗಳ ಹಿಂದೆ ನಮ್ಮ ಹಿರಿಯರು ಹತ್ತಾರು ಮಕ್ಕಳನ್ನು ಹೆತ್ತರೂ ಅದರಲ್ಲಿ ಅವರಿಗೆ ದಕ್ಕಿ ಉಳಿಯುತ್ತಿದ್ದವರು ಒಬ್ಬಿಬ್ಬರು ಮಾತ್ರ, ಮತ್ತೆ ಕೆಲ ಜನ ತಮ್ಮ ಮಕ್ಕಳನ್ನು ಯುದ್ಧ ನೆರೆ ಭೂಕಂಪ ಕೋಮುಗಲಭೆ ಸ್ವಾತಂತ್ರ್ಯ ಹೋರಾಟ ಮುಂತಾದವುಗಳಲ್ಲಿ ಕಳೆದುಕೊಂಡು ಕೂಡ ಬಂದದ್ದೆಲ್ಲ ಬರಲಿ ಭಗವಂತನ ದಯೆ ಹೊಂದಿರಲಿ ಎಂಬ ರೀತಿಯಲ್ಲಿ ತಮ್ಮ ಬದುಕನ್ನು ಸಾಗಿಸುತ್ತಿದ್ದರು.

ಆದರೆ ಇಂದಿನ ದಿನಗಳಲ್ಲಿ ನಮ್ಮ ಮನೆಗಳಲ್ಲಿ ಚಿಕ್ಕ ಪುಟ್ಟ ವಿಷಯಕ್ಕೂ ನಮ್ಮ ಜೀವನದಲ್ಲಿ ಎಲ್ಲವೂ ಕಳೆದು ಹೋಯಿತು ಎಂಬಂತೆ ಭಾವಿಸುವ ಹತ್ತು ಹಲವು ಜನ–ರಿದ್ದಾರೆ ಅವರಿಗೆ ಬದುಕನ್ನು ಎದುರಿಸುವ ಈ ಕೆಲವು ಸಲಹೆಗಳು ಉಪಯೋಗಕ್ಕೆ ಬರಬಹುದು ಎಂಬ ಆಶಯದಿಂದ ಕೆಳಗಿನ ಕೆಲ ಮಾತುಗಳನ್ನು ಹೇಳುತ್ತಿರುವುದು.

ಎಲ್ಲವೂ ನನ್ನ ಕೈ ಮೀರಿ ಹೋಗುತ್ತಿದೆ ಎಂಬ ಸಂಪೂರ್ಣ ಹತಾಶೆ ನಿಮ್ಮನ್ನು ಕಾಡಿದಾಗ, ಇನ್ನೇನು ಜೀವನವೇ ಮುಗಿದು ಹೋಯಿತು ಎಂದು ತೋರಿದಾಗ ಈ ಮಾತು ನಿಮ್ಮ ನೆನಪಿಗೆ ಬರಲಿ. ನಿಮ್ಮ ಕಣ್ಣ ಮುಂದಿನ ಪುಟ್ಟ ಜೀವಿಗಳು ನಿಮ್ಮನ್ನು ಅಚ್ಚರಿಯ ಕಂಗಳಿಂದ ವೀಕ್ಷಿಸುತ್ತಿದ್ದಾರೆ. ನೀವು ಸವಾಲುಗಳನ್ನು ಹೇಗೆ ಎದು–ರಿಸುತ್ತೀರಿ, ಪ್ರತಿ ಸೋಲಿನ ನಂತರ ಹೇಗೆ ಸಂಭಾಳಿಸಿಕೊಂಡು ಮತ್ತೆ ಎದ್ದು ನಿಲ್ಲುತ್ತೀರಿ, ಬದುಕಿನ ಹಾದಿ ಅತ್ಯಂತ ಕಠಿಣವಾಗಿದ್ದರೂ ಮುನ್ನಡೆಯುವುದನ್ನು ನಿಲ್ಲಿಸದೆ ಬದುಕಿನ ಬಂಡಿಯನ್ನು ಹೇಗೆ ಎಳೆಯುತ್ತೀರಿ ಎಂಬುದನ್ನು ಆ ಮಕ್ಕಳು ಸೂಕ್ಷ್ಮವಾಗಿ ಗಮನಿಸುತ್ತಿರುತ್ತವೆ.

ಅವರು ಕೇವಲ ನೀವು ಯಾರು ಎಂಬುದನ್ನು ಅರಿಯಲು ಹಾಗೆ ಗಮನಿಸುವುದಿಲ್ಲ... ಅಂತಹ ಸಮಯದಲ್ಲಿ ನಿಮ್ಮ ಅದ್ಭುತ ಶಕ್ತಿ, ಸಾಮರ್ಥ್ಯಗಳನ್ನು ಅವರು ಗಮನಿಸುತ್ತಾರೆ. ನೀವೇ ಅವರ ಮೊದಲ ನಾಯಕರಾಗಿರುತ್ತೀರಿ, ನೀವೇ ಅವರಿಗೆ ಮೊತ್ತ ಮೊದಲ ಮಾದರಿಯಾಗಿರುತ್ತೀರಿ ಮತ್ತು ಅವರಿಗೆ ಮಾರ್ಗದರ್ಶನ ತೋರುವ ದಿಕ್ಸೂಚಿಯಾಗಿರುತ್ತೀರಿ.

ನೀವು ಮುಂದೆ ಇಡುವ ಪ್ರತಿ ಹೆಜ್ಜೆಯೂ ಅದೆಷ್ಟೇ ಚಿಕ್ಕದಾಗಿರಲಿ, ಗಟ್ಟಿಯಾಗಿ ನಿಂತು ಹೋರಾಡುವ ನಿಮ್ಮ ಛಲವನ್ನು, ಬದ್ಧತೆಯನ್ನು ತೋರುತ್ತದೆ. ನೀವು ಹಿಂಬಾಲಿಸುವ ಪ್ರತಿಯೊಂದು ಕನಸು ಅವರಿಗೆ ಧೈರ್ಯವನ್ನು ತುಂಬುತ್ತದೆ ಮತ್ತು ನೀವು ಕೈ ಚೆಲ್ಲದ ಪ್ರತಿಯೊಂದು ಘಳಿಗೆಯೂ ಅವರಿಗೆ ಎಲ್ಲಿಯೂ ನಿಲ್ಲದೆ ಗುರಿಯನ್ನು ಮುಟ್ಟಬೇಕು ಎಂಬ ಪಾಠವನ್ನು ಹೇಳದೆಯೇ ಕಲಿಸಿಕೊಡುತ್ತದೆ. ನೀವು ಕೇವಲ ನಿಮ್ಮ ಕನಸುಗಳನ್ನು ಮಾತ್ರ ನಿರ್ಮಿಸುತ್ತಿಲ್ಲ. ಬದಲಾಗಿ ನಿಮ್ಮ ಮಕ್ಕಳ ಕನಸುಗಳಿಗೆ ಪುಷ್ಟಿ ನೀಡುತ್ತೀರಿ ಅವುಗಳ ಕಲ್ಪನೆಯ ಹಕ್ಕಿಗೆ ರೆಕ್ಕೆಯನ್ನು ನೀಡಿ ಆಗಸದಲ್ಲಿ ಹಾರಲು ಅವಕಾಶ ಮಾಡಿಕೊಡುತ್ತೀರಿ.

ಕೇವಲ ನೀವು ನಿಮಗಾಗಿ ಮಾತ್ರ ಮುಂದೆ ಸಾಗುತ್ತಿಲ್ಲ ನಿಮಗಿಂತ ಹೆಚ್ಚು ನಿಮ್ಮನ್ನು ನಂಬಿದವರಿಗಾಗಿ ನಿಮ್ಮ ಮಕ್ಕಳಿಗಾಗಿ, ನಿಮ್ಮವರಿಗಾಗಿ ನೀವು ಮುಂದೆ ಸಾಗಲೇಬೇಕು. ಅವರು ಕೂಡ ನಿಮ್ಮಂತಾಗಲು ಆಶಿಸುತ್ತಾರೆ... ಎಲ್ಲಿಯೂ ನಿಲ್ಲದೆ ಗುರಿಯತ್ತ ಮುಂದೆ ಸಾಗುವುದನ್ನು ನಿಮ್ಮ ಮಕ್ಕಳಿಗೆ ತೋರಿಸಿ ಕೊಡುವ ವ್ಯಕ್ತಿ ನೀವಾಗಿರಿ.

**Cowards die many times before their death the valliant never taste of death.. but once.**

ಹೇಡಿಯಾದ ವ್ಯಕ್ತಿ ಬದುಕಿನಲ್ಲಿ ಹತ್ತು ಹಲವು ಬಾರಿ ಹೆದರಿಯೇ ಸಾಯುತ್ತಾನೆ.... ವೀರನಾದವನು ಬದುಕಿನ ಎಲ್ಲಾ ಸಂಕಷ್ಟಗಳನ್ನು ಎದುರಿಸಿ ಅಂತಿಮವಾಗಿ ಮರಣ ಬಂದಾಗ ಮಾತ್ರ ಒಂದು ಬಾರಿ ಸಾಯುತ್ತಾನೆ.... ಎಂಬುದು ಈ ಮಾತಿನ ಅರ್ಥ.

ಆತ್ಮಹತ್ಯೆ ಹೇಡಿಯ ಕೊನೆಯ ಆಯ್ಕೆ. ನಿಜ ಹೇಳಬೇಕೆಂದರೆ ಅದೊಂದು ಆಯ್ಕೆಯೇ ಅಲ್ಲ. ಮನುಷ್ಯ ಗೆದ್ದು ಸಾಧಿಸುವುದಕ್ಕಿಂತ ಇದ್ದು ಸಾಧಿಸಬೇಕು... ಎಲ್ಲ ಸಂಕಷ್ಟಗಳನ್ನು ಎದುರಿಸಿ ಬದುಕಲು ಬೇಕಾಗುವುದೇ
ನಿಜವಾದ ಧೈರ್ಯ. ಹಾಗೆ ಬದುಕಿನಲ್ಲಿ ಸೋತು ಸೋತು ಗೆಲ್ಲುವವನೇ ಯಶಸ್ವಿ ವ್ಯಕ್ತಿಯಾಗುತ್ತಾನೆ. ಅಂತಹ ಯಶಸ್ಸು ನಿಮ್ಮದಾಗಲಿ ಎಂದು ಆಶಿಸುವ.



ವೀಣಾ ಹೇಮಂತ್ ಗೌಡ ಪಾಟೀಲ್

## ಸಿದ್ದರಾಮಯ್ಯನವರನ್ನು ಆಲಂಗಿಸಿ ಒಗಟ್ಟು ಪ್ರದರ್ಶಿಸಿದ ಸಿದ್ದು-ಡಿಕೆಶಿ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಮತ್ತೊಮೆ ಪರಸ್ಪರ ಆಲಿಂಗನದ ಮೂಲಕ ಒಗ್ಗಟ್ಟು ಪ್ರದರ್ಶಿಸಿದ್ದಾರೆ. ದೆಹಲಿಯಲ್ಲಿ ಕಳೆದ ಎರಡು ದಿನಗಳ ನಂತರ ಗಂಭೀರ ಚರ್ಚೆಯ ಬಳಿಕ ಸಚಿವ ಸಂಪುಟ ಸೇರುವವರ ಪಟ್ಟಿಗೆ ಹೈಕಮಾಂಡ್ ಅಂಗೀಕಾರ ನೀಡಿದೆ. ಇದೇ ವೇಳೆ ಸಿದ್ದರಾಮಯ್ಯ ಅವರನ್ನು ಎಐಸಿಸಿಯ ಕಾರ್ಯಕಾರಿ ಸಮಿತಿ ಸದಸ್ಯರನ್ನಾಗಿ ನೇಮಿಸಲಾಗಿದೆ.



ಪ್ರಮಾಣವಚನ ಸ್ವೀಕಾರಕ್ಕೂ ಮುನ್ನ ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿಯಾಗಲಿರುವ ಡಾ.ಜಿ.ಪರಮೇಶ್ವರ್ ಅವರೊಂದಿಗೆ ಸಿದ್ದರಾಮಯ್ಯ ಅವರ ಮನೆಗೆ ಭೇಟಿ ನೀಡಿದರು. ಈ ವೇಳೆ ಕಾರ್ಯಕ್ರಮಕ್ಕೆ ಸಿದ್ದರಾಮಯ್ಯ ಅವರನ್ನು ಇಬ್ಬರೂ ನಾಯಕರು ಆಹ್ವಾನಿಸಿದ್ದಾರೆ. ತಮ ಮನೆಗೆ ಬಂದ ಡಿ.ಕೆ.ಶಿವಕುಮಾರ್ ಅವರಿಗೆ ಶುಭ ಹಾರೈಸಿರುವ ಸಿದ್ದಾರಾಮಯ್ಯ ಆಲಂಗಿಸಿ, ಹೂಗುಚ್ಛ ನೀಡಿ ಅಭಿನಂದಿಸಿದ್ದಾರೆ. ಪರಮೇಶ್ವರ್ ಅವರು ಸಿದ್ದರಾಮಯ್ಯ ಅವ-ರಿಗೆ ಶಾಲು ಹೊದಿಸಿ, ಹಾರ ಹಾಕಿ ಸನಾನಿಸುವ ಮೂಲಕ ತಮ ಪರವಾಗಿ ವಕಾಲತ್ತು ವಹಿಸಿದ್ದಕ್ಕೆ ಧನ್ಯವಾದ ಹೇಳಿದ್ದಾರೆ. ಇದೇ ವೇಳೆ ಎಲ್ಲರ ಮುಖದಲ್ಲೂ ನಗುವಿನ ಭಾವ ಉಕ್ಕಿ ಹ-ರಿಯುತ್ತಿತ್ತು. ಮುಖ್ಯಮಂತ್ರಿ ಹುದ್ದೆ ಬಿಟ್ಟುಕೊಟ್ಟ ಸಿದ್ದರಾಮಯ್ಯ ಅವರು ಸಂತೋಷದಿಂದಲೇ ಎಂದಿನಂತೆ ಡಿ.ಕೆ.ಶಿವಕುಮಾರ್ ಮತ್ತು ಪರಮೇಶ್ವರ್ ಅವರನ್ನು ಅಭಿನಂದಿಸಿದ್ದಾರೆ. ಈ ವೇಳೆ ಹಿರಿಯ ಶಾಸಕ ಆರ್.ವಿ.ದೇಶಪಾಂಡೆ, ಸಿದ್ದರಾಮಯ್ಯ ಪುತ್ರರೂ ಆಗಿರುವ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಉಪಸ್ಥಿತರಿದ್ದರು. ಯತೀಂದ್ರ ಅವರು ಕೂಡಾ ಸಚಿವ ಸಂಪುಟ ಸೇರಲಿದ್ದಾರೆ. ಇತ್ತೀಚೆಗೆ ಸಂಪುಟ ಸಚಿವರೊಂದಿಗೆ ಉಪಾಹಾರ ಕೂಟ ನಡೆಸಿದ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದರು. ಆ ಸಭೆಯ ಆರಂಭದಲ್ಲಿ ಡಿ.ಕೆ.ಶಿವಕುಮಾರ್ ಸಿದ್ದರಾಮಯ್ಯ ಅವರ ಕಾಲಿಗೆ ನಮಸ್ಕರಿಸಿ, ಆಶೀರ್ವಾದ ಪಡೆದು ಆಲಿಂಗನದ ಮೂಲಕ ಒಗ್ಗಟ್ಟು ಪ್ರದರ್ಶಿಸಿದರು.ಇಂದು ಎರಡನೇ ಬಾರಿಗೆ ಇಬ್ಬರೂ ನಾಯಕರು ಪರಸ್ಪರ ತಬ್ಬಿಕೊಂಡು ಒಗ್ಗಟ್ಟು ಪ್ರದರ್ಶಿಸಿದ್ದಾರೆ.

## ಗಂಗಾವತಿ : ವಿಶೇಷ ಶಾಲೆಗಳ ಪ್ರವೇಶ ಪ್ರಾರಂಭ

ಕೊಪ್ಪಳ: 2026-27ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿಶೇಷ ಶಾಲೆಗಳ ಪ್ರವೇಶ ಪ್ರಾರಂಭವಾಗಿದೆ ಎಂದು ಕೊಪ್ಪಳ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳಾದ ವೆಂಕಟೇಶ ದೇಶಪಾಂಡೆ ಅವರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿರುವ ಲಯನ್ಸ್ ಬುದ್ದಿಮಾಂದ್ಯ ಮಕ್ಕಳ ವಸತಿಯುತ ಶಾಲೆ, ಗಂಗಾವತಿ ತಾಲ್ಲೂಕಿನ ದಾಸನಾಳ ಗ್ರಾಮದಲ್ಲಿರುವ ಮಾನಸ ಬುದ್ದಿಮಾಂದ್ಯ ಮಕ್ಕಳ ವಸತಿಯುತ ಶಾಲೆ ಮತ್ತು ದಾಸನಾಳದ ನಾದಬಿಂದು ಕಿವುಡ ಹಾಗೂ ಮೂಕ ಮಕ್ಕಳ ವಸತಿಯುತ ಶಾಲೆಯಲ್ಲಿ ಪ್ರಸಕ್ತ ಸಾಲಿಗೆ ಪ್ರವೇಶ ಪ್ರಾರಂಭವಾಗಿದ್ದು, ಉಚಿತ ಮತ್ತು ಗುಣ ಮಟ್ಟದ ಶಿಕ್ಷಣ ನೀಡಲು ಶಾಲೆಗಳು ಪ್ರಖ್ಯಾತವಾಗಿವೆ. ಶಿಕ್ಷಣವು ಉಚಿತವಾಗಿದ್ದು, ಊಟ, ವಸತಿ, ಸಮವಸ್ತ್ರ ಹಾಗೂ ಪುಸ್ತಕಗಳು ಮತ್ತು ಇನ್ನಿತರ ಮುಲಭೂತ ಸೌಲಭ್ಯಗಳು ಸಂಪೂರ್ಣ ಉಚಿತವಾಗಿರುತ್ತದೆ. ವಿಶೇಷ ಶಿಕ್ಷಣದಲ್ಲಿ ತರಬೇತಿ ಪಡೆದ ನುರಿತ ಅನುಭವಿ ಶಿಕ್ಷಕರಿಂದ ಮಕ್ಕಳಿಗೆ ವಿಶೇಷ ಶಿಕ್ಷಣ ಮತ್ತು ತರಬೇತಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪ್ರಭು ಹಿರೇಮಠ ಅಧಿಕ್ಷಕರು, ಲಯನ್ಸ್ ಬುದ್ದಿಮಾಂದ್ಯ ಶಾಲೆ ಗಂಗಾವತಿ ಮೊ.ಸಂ: 9241372265, ಬಸುವರಾಜ, ಮಾನಸ ಬುದ್ದಿಮಾಂದ್ಯ ಹಾಗೂ ನಾದಬಿಂದು ಕಿವುಡ ಹಾಗೂ ಮೂಕ ಮಕ್ಕಳ ಶಾಲೆ ದಾಸನಾಳ- ಮೊ.ಸಂ: 9900369336 ಸಂಪರ್ಕಿಸಬಹುದು ಎಂದು ಕೊಪ್ಪಳ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಡಿಕೆಶಿ ಪ್ರಮಾಣವಚನ : ಪಾಸ್ ಹೊಂದಿರುವವರಿಗೆ ಮಾತ್ರ ಲೋಕಭವನಕ್ಕೆ ಎಂಟ್ರಿ




ಬೆಂಗಳೂರು: ಪ್ರಮಾಣ ವಚನ ಸಮಾರಂಭಕ್ಕೆ ಪಾಸ್ ಹೊಂದಿದವರಿಗೆ ಮಾತ್ರ ಲೋಕಭವನದ ಒಳಗೆ ಪ್ರವೇಶಿಸಲು ಅವಕಾಶವಿರುತ್ತದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.ಈ ಸಂಜೆಯೊಂದಿಗೆ ಮಾತನಾಡಿದ ಅವರು, ಪಾಸ್ ಇಲ್ಲದವರು ವಿನಾಕಾರಣ ಲೋಕಭವನದ ಬಳಿ ಬರಬೇಡಿ, ಒಳಗೆ ಬಿಡುವುದಿಲ್ಲ ಎಂದರು.

ಯಾವುದೇ ಕಾರಣಕ್ಕೂ ಪಾಸ್‌ಗಳನ್ನು ದುರುಪಯೋಗ ಪಡಿಸಿಕೊಳ್ಳಬಾರದು. ಒಂದು ವೇಳೆ ದುರುಪಯೋಗ ವಾಗಿರುವುದು ಕಂಡುಬಂದರೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ.

ಒಬ್ಬರಿಗೆ ಒಂದೇ ಪಾಸ್. ಪ್ರತಿ ಪಾಸ್‌ಗೆ ಒಬ್ಬ-ರಿಗೆ ಮಾತ್ರ ಪ್ರವೇಶವಿರುತ್ತದೆ. ವಾಹನ ಪಾಸ್ ಹೊಂದಿರುವ ವಿಐಪಿ ಹಾಗೂ ವಿವಿಐಪಿಗಳಿಗೆ ಮಾತ್ರವೇ ನೇರವಾಗಿ ಆವರಣದೊಳಗೆ ವಾಹನ ತೆಗೆದುಕೊಂಡು ಹೋಗಲು ಅನುಮತಿ ನೀಡಲಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮಕ್ಕೆ ಆಹ್ವಾನ ಹೊಂದಿರುವ ವಾಹನಗಳನ್ನು ಹೊರತುಪಡಿಸಿ ಗೋಪಾಲಗೌಡ ವೃತ್ತವನ್ನು ದಾಟಿ ಮುಂದೆ ಹೋಗಲು ಯಾವುದೇ ವಾಹನಗಳಿಗೆ ಪ್ರವೇಶವಿರುವುದಿಲ್ಲ. ಕಾರ್ಯಕ್ರಮಕ್ಕೆ ಆಗಮಿಸುವವರು ಗೋಪಾಲಗೌಡ ವೃತ್ತದಿಂದ ಪೊಲೀಸ್ ತಿಮಯ್ಯ ವೃತ್ತದ ಮುಖಾಂತರ ಲೋಕಭವನಕ್ಕೆ ಪ್ರವೇಶಿಸಬೇಕು. ಬಿಗಿ ಬಂದೋಬಸ್ತ್:ಪದಗ್ರಹಣ ಸಮಾರಂಭಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಅಧಿಕಾರಿಗಳೂ ಸೇರಿದಂತೆ ಎರಡು ಸಾವಿರಕ್ಕೂ ಹೆಚ್ಚು ಪೊಲೀಸರನ್ನು ಬಂದೋಬಸ್ತ್‌ನಲ್ಲಿ ನಿಯೋಜಿಸಲಾಗಿದೆ. ಇಡೀ ಜಾಗವನ್ನು ವಿವಿಧ ಸೆಕ್ಟರ್‌ಗಳಾಗಿ ವಿಂಗಡಿಸಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪತ್ರಿ ಸೆಕ್ಟರ್‌ಗೂ ಒಬ್ಬರು ಡಿಸಿಪಿ ದರ್ಜೆಯ ಅಧಿಕಾರಿಗೆ ನೇತೃತ್ವದ ಜವಾಬ್ದಾರಿ ನೀಡಲಾಗಿದೆ.

ಮೂರು ಮಂದಿ ಜಂಟಿ ಪೊಲೀಸ್ ಆಯುಕ್ತರು, 20 ಕ್ಕೂ ಡಿಸಿಪಿಗಳು, 50 ಕ್ಕೂ ಹೆಚ್ಚು ಎಸಿಪಿಗಳು, 100 ಕ್ಕೂ ಹೆಚ್ಚು ಇನ್?ಸಪೆಕ್ಟರ್‌ಗಳು, 300 ಕ್ಕೂ ಹೆಚ್ಚು ಪಿಎಸ್ಐಗಳು, 700 ಕ್ಕೂ ಹೆಚ್ಚು ಕಾನ್?ಸಟೇಬಲ್‌ಗಳು ಹಾಗೂ ಕೆ-ಎಸ್ಆರ್‌ಪಿ ತುಕಡಿಗಳು ಸೇರಿದಂತೆ ಒಟ್ಟು ಎರಡು ಸಾವಿರಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಹಾಗೂ ಸಂಚಾರ ದಟ್ಟಣೆ ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಆಯುಕ್ತರು ತಿಳಿಸಿದರು.

## ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪದಗ್ರಹಣಕ್ಕೆ ಕ್ಷಣಗಣನೆ

ಬೆಂಗಳೂರು: ಉಪ ಮುಖ್ಯಮಂತ್ರಿಯಾಗಿದ್ದ ಡಿ.ಕೆ.ಶಿವಕುಮಾರ್ ಇಂದು ಮುಖ್ಯಮಂತ್ರಿಯಾಗಿ 12 ಜನ ಸಚಿವರೊಂದಿಗೆ ಪ್ರಮಾಣವಚನ ಸ್ವೀಕ-ರಿಸಲಿದ್ದಾರೆ.ಲೋಕಭವನದಲ್ಲಿ ಸಂಜೆ 4.05ಕ್ಕೆ ನಡೆಯುವ ಸರಳ ಹಾಗೂ ಅರ್ಥಪೂರ್ಣ ಸಮಾರಂಭಕ್ಕಾಗಿ ಭಾರೀ ಸಿದ್ಧತೆಗಳು ನಡೆದಿವೆ. ಜ್ಯೋತಿಷಿಗಳ ಸಲಹೆ ಮೇರೆಗೆ ವೇದಿಕೆಯನ್ನು ಸಜ್ಜುಗೊಳಿಸಲಾಗಿದೆ. ಎಐಸಿಸಿಯ ಪ್ರಮುಖ ನಾಯಕರು, ಖ್ಯಾತ ಚಲನಚಿತ್ರ ನಟ-ನಟಿಯರು ಸೇರಿದಂತೆ ಸುಮಾರು 1 ಸಾವಿರ ಗಣ್ಯರಿಗೆ ಆಹ್ವಾನ ನೀಡಲಾಗಿದೆ.

ಡಿ.ಕೆ.ಶಿವಕುಮಾರ್ ಅವರು ಇಂದು ಬೆಳಗ್ಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಮನೆಗೆ ಭೇಟಿ ನೀಡಿ, ಆಶೀರ್ವಚನ ಪಡೆಯಲಿದ್ದು, ಕಾರ್ಯಕ್ರಮಕ್ಕೆ ಆಹ್ವಾನ ನೀಡಲಿದ್ದಾರೆ. ಪ್ರಮಾಣವಚನ ಸ್ವೀಕಾರ ಬಳಿಕ, ಎಲ್ಲಾ ಮಾಜಿ ಮುಖ್ಯಮಂತ್ರಿಗಳು ಕೆಪಿಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಿದ್ದಾರೆ.

ಪ್ರಮಾಣವಚನ ಕಾರ್ಯಕ್ರಮಕ್ಕಾಗಿ ಲೋಕ ಭವನದವರೆಗೆ ಸುಮಾರು 5 ಸಾವಿರ ಜನರಿಗಾಗುವಷ್ಟು ಸ್ಥಳಾವಕಾಶ ಕಲ್ಪಿಸಲಾಗಿದೆ. ಸಂಚಾರ ವ್ಯವಸ್ಥೆ, ವಾಹನ ನಿಲುಗಡೆಯನ್ನು ಬದಲಾವಣೆ ಮಾಡಲಾಗಿದೆ. ವೇದಿಕೆಯ ಮೇಲೆ 20 ಜನರಿಗೆ ಆಸನ ವ್ಯವಸ್ಥೆ, ಸಮೀಪದಲ್ಲೇ 40ಕ್ಕೂ ಹೆಚ್ಚು ವಿವಿಧ ಧರ್ಮಗಳ ಮಠಾದೀಶರು, ಫಾದರ್‌ಗಳು, ಮೌಲ್ವಿಗಳು ಹಾಗೂ ಸಂತ-ರಿಗೆ ವ್ಯವಸ್ಥೆ ಮಾಡಲಾಗಿದೆ. ಲೋಕಭವನದ ಒಳಗಡೆ ವಾಹನ ನಿಲುಗಡೆಯನ್ನು ಸಂಪೂರ್ಣ ನಿರ್ಬಂಧಿಸಲಾಗಿದ್ದು, ಮುಖ್ಯ ದ್ವಾರದಿಂದ ಸಭಾಂಗಣದವರೆಗೂ ವಿಐಪಿಗಳನ್ನು ಕರೆದೊಯ್ಯಲು ಎಲೆಕ್ಟ್ರಿಕ್ ವಾಹನಗಳನ್ನು ಸಜ್ಜುಗೊಳಿಸಲಾಗಿದೆ.

ಡಿ.ಕೆ.ಶಿವಕುಮಾರ್ ಅವರ ಜೀವನದ ಅಮೃತಗಳಿಗೆಗಾಗಿ ನಾಡಿನ ವಿವಿಧ ಮಠಗಳು, ಧಾರ್ಮಿಕ ಸಂಸ್ಥೆಗಳು ಶುಭ ಹಾರೈಸಿವೆ. ಮೈಸೂರಿನ ಸುತ್ತೂರು ಮಠದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಪ್ರಸಾದ, ಫಲಪುಷ್ಪಗಳನ್ನು ಆಶೀರ್ವಚನ ರೂಪದಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಕಳುಹಿಸಲಾಗಿದೆ. ನಿನ್ನೆ ತಡರಾತ್ರಿ 11ಗಂಟೆಯಿಂದ 2ಗಂಟೆಯವರೆಗೂ ಡಿ.ಕೆ.ಶಿವಕುಮಾರ್, ಪತ್ನಿ ಉಷಾರವರ ಜೊತೆಗೂಡಿ ನಾಗರಬಾವಿಯಲ್ಲಿರುವ ಅಜ್ಜಯ್ಯನ ಪೀಠಕ್ಕೆ ತೆರಳಿ, ವಿಶೇಷ ಪೂಜೆ ಸಲ್ಲಿಸಿದ್ದರು. ಅಲ್ಲಿನ ಶ್ರೀಗಳ ಜೊತೆಗೆ ಸುದೀರ್ಘ ಸಮಾಲೋಚನೆ ನಡೆಸಿ, ಸಲಹೆ ಸೂಚನೆ ಪಡೆದಿದ್ದಾರೆ.

**ಲೋಕಭವನಕ್ಕೆ ಪಟ್ಟಿ ರವಾನೆ:**

ಎರಡು ಹಂತದಲ್ಲಿ ಸಚಿವ ಸಂಪುಟ ರಚನೆಯಾಗಲಿದ್ದು, ಸಂಭವನೀಯ ಸಚಿವರ ಕುರಿತು ನಿನ್ನೆ ಹೈಕಮಾಂಡ್ ಜೊತೆ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಸಮಗ್ರ ಚರ್ಚೆ ನಡೆಸಿದ್ದರು. ಬಹುತೇಕ ಮೊದಲ ಹಂತದಲ್ಲಿ 12 ಮಂದಿ ಸಚಿವರ






ಪಟ್ಟಿಗೆ ಹೈಕಮಾಂಡ್ ಹಸಿರು ನಿಶಾನೆ ತೋರಿಸಿದೆ. ಆ ಪಟ್ಟಿಯನ್ನು ಇಂದು ಬೆಳಗ್ಗೆ ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಪ್ರಮಾಣವಚನ ಬೋಧಿಸಲಿರುವ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ರವಾನಿಸಿದ್ದಾರೆ. ಮೂಲಗಳ ಪ್ರಕಾರ ಡಾ.ಜಿ.ಪರಮೇಶ್ವರ್, ಕೆ.ಜೆ. ಜಾರ್ಜ್, ಕೃಷ್ಣ ಭೈರೇಗೌಡ, ರಾಮಲಿಂಗಾರೆಡ್ಡಿ, ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ, ಕೆ. ಎಚ್.ಮುನಿಯಪ್ಪ, ಸತೀಶ್‌ಜಾರಕಿಹೊಳಿ, ದಿನೇಶ್ ಗುಂಡೂರಾವ್, ಶರಣಪ್ರಕಾಶ್ ಪಾಟೀಲ್, ಯು.ಟಿ.ಖಾದರ್, ಡಾ.ಯತೀಂದ್ರ ಸಿದ್ದರಾಮಯ್ಯ ಅವರ ಹೆಸರುಗಳ ಪಟ್ಟಿಯನ್ನು ಡಿ.ಕೆ.ಶಿವಕುಮಾರ್ ರಾಜ್ಯಭವನಕ್ಕೆ ಕಳುಸಿದ್ದಾರೆ ಎನ್ನಲಾಗಿದೆ. ವಿಧಾನ ಸಭಾಧ್ಯಕ್ಷರಾಗಿರುವ ಯು.ಟಿ.ಖಾದರ್ ಇಂದು ಮ ಧ್ಯಾಹ್ನ ಉಪಾಧ್ಯಕ್ಷ ರುದ್ರಪ್ಪ ಲಮಾಣಿಯವರಿಗೆ ತಮ ರಾಜೀನಾಮೆ ಪತ್ರವನ್ನು ಸಲ್ಲಿಸಲಿದ್ದಾರೆ. ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರುಗಳಿಗೆ ರಾಜ್ಯ ಭವನಕ್ಕೆ ಬರುವಂತೆ ಸಂದೇಶ ರವಾನೆಯಾಗಿದೆ.

ಆರಂಭದಲ್ಲಿ ಉಪ ಮುಖ್ಯಮಂತ್ರಿಗಳ ಹುದ್ದೆ ಬೇಡ ಎಂದು ಡಿ.ಕೆ.ಶಿವಕುಮಾರ್ ಹಠ ಹಿಡಿದಿದ್ದರು. ಆದರೆ ಸಿದ್ದರಾಮಯ್ಯ ಅವರ ಬಿಗಿ ಪಟ್ಟಿನಿಂದಾಗಿ ಪರಮೇಶ್ವರ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ದೊರೆಯಲಿದೆ ಎನ್ನಲಾಗುತ್ತಿದೆ. ಆದರೆ ಅದು ಈವರೆಗೂ ಖಚಿತವಾಗಿಲ್ಲ. ವಿಧಾನಸಭಾಧ್ಯಕ್ಷ ಸ್ಥಾನಕ್ಕೆ ಹಿರಿಯ ನಾಯಕರಾದ ಎಚ್.ಕೆ.ಪಾಟೀಲ್ ಅವರನ್ನು ನೇಮಿಸಲು ಪಕ್ಷ ವರಿಷ್ಠರು ತೀರ್ಮಾನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಮೊದಲು ಫುಟ್‌ಪಾತ್ ನಿರ್ಮಿಸಿ, ನಂತರ ಸಲಹೆ ನೀಡಿ : ಟ್ರೋಲ್ ಆದ ಜಿಬಿಎ ಐಡಿಯಾ




ಬೆಂಗಳೂರು: ಒಂದು ಕಿ.ಮೀ ದೂರಕ್ಕೆ ಕಾಲ್ನಡಿಗೆಯಲ್ಲಿ ಹೋಗಿ ಎಂಬ ಜಿಬಿಎ ಸಲಹೆಗೆ ಸಾಮಾಜಿಕ ಜಾಲತಾಣದಲ್ಲಿ ಭಾರಿ ವಿರೋಧ ವ್ಯಕ್ತವಾಗಿದೆ.ನಾಗರಿಕರಲ್ಲಿ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಗ್ರೇಟ-ರ್ ಬೆಂಗಳೂರು ಪ್ರಾಧಿಕಾರ ಸಾಮಾಜಿ-ಕ ಜಾಲತಾಣದಲ್ಲಿ ಹಾಕಿದ್ದ 1 ಕಿಲೋಮೀಟರ್ ಚಾಲೆಂಜ್ ಇದೀಗ ತೀವ್ರ ಟೀಕೆಗೆ ಗುರಿಯಾಗಿದೆ. ಒಂದು ಕಿಲೋ ಮೀಟರ್‌ವರೆಗೆ ಇರುವ ದೂರವನ್ನು ವಾಹನ ಬಳಸದೆ ಕಾಲ್ನಡಿಗೆಯಲ್ಲೇ ಕ್ರಮಿಸಿ ಎಂದು ನೀಡಿದ್ದ ಸಲಹೆ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

1 ಕಿಲೋಮೀಟರ್ ವರೆಗಿನ ದೂರವನ್ನು ನಡೆಯುತ್ತಲೇ ಕ್ರಮಿಸಿ, ಪಾದಚಾರಿ ಮಾರ್ಗಗಳನ್ನು ಬಳಸಿ, ಪರಿಸರ ಸ್ನೇಹಿಯಾಗಿ ಎಂಬ ಸಂದೇಶದೊಂದಿಗೆ ಪೋಸ್ಟ್ ಮಾಡಿತ್ತು. ಆದರೆ ಈ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ನೆಟ್ಟಿಗರು, ಮೊದಲು ನಡೆಯಲು ಯೋಗ್ಯವಾದ ಫುಟ್‌ಪಾತ್ ನಿರ್ಮಿಸಿ, ನಂತರ ಇಂತಹ ಚಾಲೆಂಜ್ ನೀಡಿ ಎಂದು ತಿರುಗೇಟು ನೀಡಿದ್ದಾರೆ.

ನಗರದ ಬಹುತೇಕ ಪ್ರದೇಶಗಳಲ್ಲಿ ಪಾದಚಾರಿ ಮಾರ್ಗಗಳ ಸ್ಥಿತಿ ದಯನೀಯವಾಗಿದೆ. ಹಲವೆಡೆ ಫುಟ್‌ಪಾತ್‌ಗಳು ಒಡೆದು ಹೋಗಿದ್ದರೆ, ಇನ್ನೂ ಕೆಲವು ಕಡೆಗಳಲ್ಲಿ ವ್ಯಾಪಾರಿಗಳು, ವಾಹನಗಳು ಹಾಗೂ ವಿವಿಧ ಅತಿಕ್ರಮಣಗಳಿಂದ ಪಾದಚಾರಿಗಳಿಗೆ ನಡೆಯಲು ಜಾಗವೇ ಇಲ್ಲದಂತಾಗಿದೆ. ಕೆಲವೆಡೆ ಚರಂಡಿ ಮುಚ್ಚಳಗಳಿಲ್ಲದಿರುವುದು, ಗುಂಡಿಗಳು ಹಾಗೂ ಅಸಮತೋಲನದ ಮೇಲ್ಮೈಗಳಿಂದ ಪಾದಚಾ-ರಿಗಳ ಸುರಕ್ಷತೆ ಪ್ರಶ್ನಾರ್ಥಕವಾಗಿದೆ ಎಂದು ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಹಲವರು ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಲ್ಲಿ ನೆಟ್ಟಗೆ 100 ಮೀಟರ್ ಕೂಡ ಅಡೆತಡೆಗಳಿಲ್ಲದ ಫುಟ್‌ಪಾತ್ ಸಿಗುವುದು ಕಷ್ಟ. ಒಂದು ಕಿಲೋಮೀಟರ್ ನಡೆಯಿರಿ ಎನ್ನುವುದು ವಾಸ್ತವಕ್ಕೆ ದೂರವಾದ ಸಲಹೆ ಎಂದು ಕಿಡಿಕಾರಿದ್ದಾರೆ. ಫುಟ್‌ಪಾತ್ ಮೇಲೆ ಕಾಲಿಟ್ಟರೆ ಜೀವಕ್ಕೆ ಗ್ಯಾರಂಟಿ ಇಲ್ಲದ ಪರಿಸ್ಥಿತಿ ಇದೆ ಎಂಬ ಅಭಿಪ್ರಾಯಗಳೂ ವ್ಯಕ್ತವಾಗಿವೆ.

ಕೆಲವೆಡೆ ಫುಟ್‌ಪಾತ್ ಸಂಪೂರ್ಣವಾಗಿ ಒಡೆದು ಹೋಗಿದ್ದರೆ, ಇನ್ನೂ ಕೆಲವು ಕಡೆಗಳಲ್ಲಿ ಮರಗಳ ಬೇರುಗಳು, ವಿದ್ಯುತ್ ಕಂಬಗಳು ಹಾಗೂ ವಿವಿಧ ಅಡ್ಡಿಗಳಿಂದ ಪಾದಚಾರಿಗಳು ರಸ್ತೆಯಲ್ಲೇ ನಡೆಯುವ ಅನಿವಾರ್ಯತೆ ಎದುರಿಸುತ್ತಿದ್ದಾರೆ.ಪಾದಚಾರಿ ಸ್ನೇಹಿ ನಗರ ನಿರ್ಮಾಣದ ಬಗ್ಗೆ ಮಾತುಗಳಿಗಿಂತ ಮೊದಲು ಸುರಕ್ಷಿತ, ನಿರಂತರ ಮತ್ತು ಗುಣಮಟ್ಟದ ಫುಟ್‌ಪಾತ್‌ಗಳನ್ನು ಒದಗಿಸುವುದು ಅಗತ್ಯ ಎಂದು ನಾಗರಿಕರು ಆಗ್ರಹಿಸಿದ್ದಾರೆ.

ಇಲ್ಲದಿದ್ದರೆ ಇಂತಹ ಜಾಗೃತಿ ಅಭಿಯಾನಗಳು ಸಾಮಾಜಿಕ ಜಾಲತಾಣಗಳಲ್ಲಿ ಟ್ರೋಲ್ ಹಾಗೂ ಟೀಕೆಗೆ ಮಾತ್ರ ಆಹಾರವಾಗುತ್ತವೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.ಒಟ್ಟಾರೆ, ಪರಿಸರ ಕಾಳಜಿಯ ಸಂದೇಶ ನೀಡಲು ಹೋಗಿದ್ದ , ನಗರದ ನೆಲದ ವಾಸ್ತವವನ್ನು ಮರೆತು ಪೋಸ್ಟ್ ಹಾಕಿದ ಕಾರಣ ಇದೀಗ ಸಾರ್ವಜನಿಕರ ಛೀಮಾರಿಗೆ ಗು-ರಿಯಾಗಿದೆ. ಮೊದಲು ಫುಟ್‌ಪಾತ್ ಸರಿಪಡಿಸಿ, ನಂತರ ಚಾಲೆಂಜ್ ಕೊಡಿ ಎಂಬುದು ಬಹುತೇಕ ನಾಗರಿಕರ ಒಕ್ಕೊರಲಿನ ಆಗ್ರಹವಾಗಿದೆ.

# 13 ಸಚಿವರೊಂದಿಗೆ ಸಿಎಂ ಆಗಿ ಇಂದು ಡಿಕೆಶಿ ಪ್ರಮಾಣ : ಇಲ್ಲಿದೆ ಲಿಸ್ಟ್

ಬೆಂಗಳೂರು: ಉಪ ಮುಖ್ಯಮಂತ್ರಿಯಾಗಿದ್ದ ಡಿ.ಕೆ.ಶಿವಕುಮಾರ್ ಇಂದು ರಾಜ್ಯದ 25ನೇ ಮುಖ್ಯಮಂತ್ರಿಯಾಗಿ 13 ಜನ ಸಚಿವರೊಂದಿಗೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಸಂಪುಟದಲ್ಲಿ ಬಹುತೇಕ ಕಿರಿಯ ಹಾಗೂ ಅನುಭವಿಗಳಿಗೆ ಆದ-ೖತೆ ನೀಡಲಾಗಿದೆ. ನಾಲ್ಕು ಉಪಮುಖ್ಯಮಂತ್ರಿಗಳ ಪ್ರಸ್ತಾವನೆಯನ್ನು ಕೈಬಿಟ್ಟಿರುವ ಹೈಕಮಾಂಡ್, ಡಾ.ಜಿ.ಪರಮೇಶ್ವರ್ ಅವರನ್ನು ಏಕೈಕ ಪ ಮುಖ್ಯಮಂತ್ರಿಯನ್ನಾಗಿ ನಿಯೋಜಿಸಿದೆ.

ನೂತನ ಸಂಪುಟ: ಡಿ.ಕೆ.ಶಿವಕುಮಾರ್-ಮುಖ್ಯಮಂತ್ರಿ

ಡಾ.ಜಿ.ಪರಮೇಶ್ವರ್-ಉಪಮುಖ್ಯಮಂತ್ರಿ

ಸಚಿವರು: ಕೆ.ಎಚ್.ಮುನಿಯಪ್ಪ ಟಕೆ.ಜೆ.ಜಾರ್ಜ್ ಎಂ.ಬಿ.ಪಾಟೀಲ್ ರಾಮಲಿಂಗಾರೆಡ್ಡಿ ಸತೀಶ್ ಜಾರಕಿಹೊಳಿ ಕೃಷ್ಣ ಭೈರೇಗೌಡ ಪ್ರಿಯಾಂಕ್ ಖರ್ಗೆ ಯು.ಟಿ.ಖಾದರ್ ಈಶ್ವರ್ ಖಂಡ್ರೆ ಯತೀಂದ್ರ ಸಿದ್ದರಾಮಯ್ಯ ಬೈರತಿ ಸುರೇಶ್ ಶರಣ ಪ್ರಕಾಶ್ ಪಾಟೀಲ್ ಲೋಕಭವನದಲ್ಲಿ ಸಂಜೆ 4.05ಕ್ಕೆ ನಡೆಯುವ ಸರಳ ಹಾಗೂ ಅರ್ಥಪೂರ್ಣ ಸಮಾರಂಭಕ್ಕಾಗಿ ಭಾರೀ ಸಿದ್ಧತೆಗಳು ನಡೆದಿವೆ. ಜ್ಯೋತಿಷಿಗಳ ಸಲಹೆ ಮೇರೆಗೆ ವೇದಿಕೆಯನ್ನು ಸಜ್ಜುಗೊಳಿಸಲಾಗಿದೆ. ಎಐಸಿಸಿಯ ಪ್ರಮುಖ ನಾಯಕರು, ಖ್ಯಾತ ಚಲನಚಿತ್ರ ನಟ-ನಟಿಯರು ಸೇರಿದಂತೆ ಸುಮಾರು 1 ಸಾವಿರ ಗಣ್ಯರಿಗೆ ಆಹ್ವಾನ ನೀಡಲಾಗಿದೆ.



ಡಿ.ಕೆ.ಶಿವಕುಮಾರ್ ಅವರು ಇಂದು ಬೆಳಗ್ಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮನೆಗೆ ಭೇಟಿ ನೀಡಿ ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಬಿಜೆಪಿಯ ಹಿರಿಯ ನಾಯಕರಾಗಿರುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಆವರ ಮನೆಗೆ ಭೇಟಿ ನೀಡಿದ ಡಿ.ಕೆ.ಶಿವಕುಮಾರ್ ದೇವರ ಕೋಣೆಗೆ ಹೋಗಿ ಕೈ ಮುಗಿದು ವಿಭೂತಿ ಹಣೆಗೆ ಹಚ್ಚಿಕೊಂಡು ನಂತರ ಹೊರಗೆ ಬಂದು ಯಡಿಯೂರಪ್ಪ ಅವರ ಅಭಿನಂದನೆ ಸ್ವೀಕರಿಸಿದ್ದಾರೆ. ಬಳಿಕ ಯಡಿಯೂರಪ್ಪ ಅವರಿಗೆ ಆಹ್ವಾನ ನೀಡಿದ್ದಾರೆ.

ನಂತರ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಮನೆಗೆ ಭೇಟಿ ನೀಡಿ, ಆಶೀರ್ವಚನ ಪಡೆಯಲಿದ್ದು, ಕಾರ್ಯಕ್ರಮಕ್ಕೆ ಆಹ್ವಾನ ನೀಡಲಿದ್ದಾರೆ. ಪ್ರಮಾಣವಚನ ಸ್ವೀಕಾರದ ಬಳಿಕ, ಎಲ್ಲಾ ಮಾಜಿ ಮುಖ್ಯಮಂತ್ರಿಗಳು ಕೆಪಿಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಿದ್ದಾರೆ. ಪ್ರಮಾಣವಚನ ಕಾರ್ಯಕ್ರಮಕ್ಕಾಗಿ ಲೋಕ ಭವನದವರೆಗೆ ಸುಮಾರು 5 ಸಾವಿರ ಜನ-ರಿಗಾಗುವಷ್ಟು ಸ್ಥಳಾವಕಾಶ ಕಲ್ಪಿಸಲಾಗಿದೆ. ಸಂಚಾರ ವ್ಯವಸ್ಥೆ, ವಾಹನ ನಿಲುಗಡೆಯನ್ನು ಬದಲಾವಣೆ ಮಾಡಲಾಗಿದೆ. ವೇದಿಕೆಯ ಮೇಲೆ 20 ಜನ-ರಿಗೆ ಆಸನ ವ್ಯವಸ್ಥೆ, ಸಮೀಪದಲ್ಲೇ 40ಕ್ಕೂ ಹೆಚ್ಚು ವಿವಿಧ ಧರ್ಮಗಳ ಮಠಾಧೀಶರು, ಫಾದರ್‌ಗಳು, ಮೌಲ್ವಿಗಳು ಹಾಗೂ ಸಂತರಿಗೆ ವ್ಯವಸ್ಥೆ ಮಾಡಲಾಗಿದೆ. ಲೋಕಭವನದ ಒಳಗಡೆ ವಾಹನ ನಿಲುಗಡೆಯನ್ನು ಸಂಪೂರ್ಣ ನಿರ್ಬಂಧಿಸಲಾಗಿದ್ದು, ಮುಖ್ಯ ದ್ವಾರದಿಂದ ಸಭಾಂಗಣದವರೆಗೂ ವಿಐಪಿಗಳನ್ನು ಕರೆದೊಯ್ಯಲು ಎಲೆಕ್ಟ್ರಿಕ್ ವಾಹನಗಳನ್ನು ಸಜ್ಜುಗೊಳಿಸಲಾಗಿದೆ.

ಡಿ.ಕೆ.ಶಿವಕುಮಾರ್ ಅವರ ಜೀವನದ ಅಮೃತಗಳಿಗೆಗಾಗಿ ನಾಡಿನ ವಿವಿಧ ಮಠಗಳು, ಧಾರ್ಮಿಕ ಸಂಸ್ಥೆಗಳು ಶುಭ ಹಾರೈಸಿವೆ. ಮೈಸೂ-ರಿನ ಸುತ್ತೂರು ಮಠದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಪ್ರಸಾದ, ಫಲಪುಷ್ಪಗಳನ್ನು ಆಶೀರ್ವಾದ ರೂಪದಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಕಳುಹಿಸಲಾಗಿದೆ. ನಿನ್ನೆ ತಡರಾತ್ರಿ 11ಗಂಟೆಯಿಂದ 2ಗಂಟೆಯವರೆಗೂ ಡಿ.ಕೆ.ಶಿವಕುಮಾರ್, ಪತ್ನಿ ಉಷಾರವರ ಜೊತೆಗೂಡಿ ನಾಗರಬಾವಿಯಲ್ಲಿರುವ ಅಜ್ಜಯ್ಯನ ಪೀಠಕ್ಕೆ ತೆರಳಿ, ವಿಶೇಷ ಪೂಜೆ ಸಲ್ಲಿಸಿದರು. ಅಲ್ಲಿನ ಶ್ರೀಗಳ ಜೊತೆಗೆ ಸುದೀರ್ಘ ಸಮಾಲೋಚನೆ ನಡೆಸಿ, ಸಲಹೆ ಸೂಚನೆ ಪಡೆದಿದ್ದಾರೆ.

**ಲೋಕಭವನಕ್ಕೆ ಪಟ್ಟಿ ರವಾನೆ:**

ಎರಡು ಹಂತದಲ್ಲಿ ಸಚಿವ ಸಂಪುಟ ರಚನೆಯಾಗಲಿದ್ದು, ಸಂಭವನೀಯ ಸಚಿವರ ಕು-ರಿತು ನಿನ್ನೆ ಹೈಕಮಾಂಡ್ ಜೊತೆ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಸಮಗ್ರ ಚರ್ಚೆ ನಡೆಸಿದ್ದರು. ಬಹುತೇಕ ಮೊದಲ ಹಂತದಲ್ಲಿ 13 ಮಂದಿ ಸಚಿವರ ಪಟ್ಟಿಗೆ ಹೈಕಮಾಂಡ್ ಹಸಿರು ನಿಶಾನೆ ತೋ-ರಿಸಿದೆ. ಆ ಪಟ್ಟಿಯನ್ನು ಇಂದು ಬೆಳಗ್ಗೆ ನಿಯೋಜಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಪ್ರಮಾಣವಚನ ಬೋಧಿಸಲಿರುವ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ರವಾನಿಸಿದ್ದಾರೆ.

ಮೂಲಗಳ ಪ್ರಕಾರ ಡಾ.ಜಿ.ಪರಮೇಶ್ವರ್, ಕೆ.ಜೆ.ಜಾರ್ಜ್, ಕೃಷ್ಣ ಭೈರೇಗೌಡ, ರಾಮಲಿಂಗಾರೆಡ್ಡಿ, ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ, ಈಶ್ವರ್ ಖಂಡ್ರೆ, ಕೆ.ಎಚ್.ಮುನಿಯಪ್ಪ, ಸತೀಶ್‌ಜಾರಕಿಹೊಳಿ, ಬೈರತಿ ಸುರೇಶ್, ಶರಣಪ್ರಕಾಶ್ ಪಾಟೀಲ್, ಯು.ಟಿ.ಖಾದರ್, ಡಾ.ಯತೀಂದ್ರ ಸಿದ್ದರಾಮಯ್ಯ ಅವರ ಹೆಸರುಗಳ ಪಟ್ಟಿಯನ್ನು ಡಿ.ಕೆ.ಶಿವಕುಮಾರ್ ಲೋಕಭವನಕ್ಕೆ ಕಳುಸಿದ್ದಾರೆ ಎನ್ನಲಾಗಿದೆ. ವಿಧಾನ ಸಭಾಧ್ಯಕ್ಷರಾಗಿರುವ ಯು.ಟಿ.ಖಾದರ್ ಇಂದು ಮಧ್ಯಾಹ್ನ ಉಪಾಧ್ಯಕ್ಷ ರುದ್ರಪ್ಪ ಲಮಾಣಿಯವ-ರಿಗೆ ತಮ ರಾಜೀನಾಮೆ ಪತ್ರವನ್ನು ಸಲ್ಲಿಸಲಿದ್ದಾರೆ. ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಲೋಕಭವನಕ್ಕೆ ಬರುವಂತೆ ಸಂದೇಶ ರವಾನೆಯಾಗಿದೆ. ಆರಂಭದಲ್ಲಿ ಉಪ ಮುಖ್ಯಮಂತ್ರಿಗಳ ಹುದ್ದೆ ಬೇಡ ಎಂದು ಡಿ.ಕೆ.ಶಿವಕುಮಾರ್ ಹಠ ಹಿಡಿದಿದ್ದರು. ಆದ-'ರೆ ಸಿದ್ದರಾಮಯ್ಯ ಅವರ ಬಿಗಿ ಪಟ್ಟಿನಿಂದಾಗಿ ಪರಮೇಶ್ವರ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ದೊರೆತ್ತಿದೆ.

ವಿಧಾನಸಭಾಧ್ಯಕ್ಷ ಸ್ಥಾನಕ್ಕೆ ಹಿರಿಯ ನಾಯಕರಾದ ಎಚ್.ಕೆ.ಪಾಟೀಲ್ ಅವರನ್ನು ನೇಮಿಸಲು ಪಕ್ಷ ವರಿಷ್ಠರು ತೀರ್ಮಾನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಬಿ.ಕೆ.ಹರಿಪ್ರಸಾದ್ ಅವರ ಹೆಸರು ಕೇಳಿ ಬಂದಿದ್ದು, ಸಚಿವ ಸ್ಥಾನದ ಆಕಾಂಕ್ಷಿಯಾಗಿರುವ ಅವರು ಈವರೆಗೂ ಪಕ್ಷದ ಜವಾಬ್ದಾರಿ ವಹಿಸಿಕೊಳ್ಳುವ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101.
Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101.